# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 110 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–11–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 110 | Title- Code: KARKAN 28269 | Chitradurga | Date: 09-11-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಿಲ್ಲಾ ಆಸ್ಪತ್ರೆ ವೈದ್ಯರಿಗೆ ಹಣ ನೀಡಬೇಡಿ: ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಮಾಹಿತಿ 2

ಗಣಿ ಅಧಿಕಾರಿ ಪ್ರತಿಮಾ ಕೊಲೆ ಪ್ರಕರಣ: ಸಿಐಡಿಗೆ ಕೊಡಿ 3

1973 ರ 'ಕರ್ನಾಟಕ'ದ ವರ್ತಮಾನ ಹೇಗಿತ್ತು? 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಯೋಗ ಧ್ಯಾನ ಶಿಬಿರ

» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್ ಮಹಿಳಾ ಪತಂಜಲಿ ಯೋಗ ಸಮಿತಿ ಯುವ ಭಾರತ್ ಪತಂಜಲಿ ಕಿಸಾನ್ ಸೇವಾ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಉಚಿತ ಯೋಗ ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ ಶಿಬಿರವು ನ. 10 ರಿಂದ ಡಿ.04 ರವರೆಗೆ ನಗರದ ಹೊಳಲ್ಕೆರೆ ರಸ್ತೆಯಲ್ಲಿನ ಬರಗೇರಮ್ಮ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಚಾಲಕರಾದ ಟಿ.ಕೃಷ್ಣಮೂರ್ತಿ ತಿಳಿಸಿದ್ದಾರೆ. 25 ದಿನಗಳ ಈ ಶಿಬಿರದಲ್ಲಿ ಬೆಳಿಗ್ಗೆ 5.30 ರಿಂದ 7.30ರವರೆಗೆ ಯೋಗವನ್ನು ಟಿ.ಕೃಷ್ಣಮೂರ್ತಿ, ರಾಮ ನರೇಶ್, ಕೆ.ರಾಮರಾಜ್, ಶ್ರೀಮತಿ ಎಲ್ ಲತಾ, ಶ್ರೀಮತಿ ಎಶ್,ನಾಗಮ್ಮ, ಶ್ರೀಮತಿ ಸುಮಲತಾ ಟಿ.ಕೆ. ಹಾಗೂ ಶ್ರೀಮತಿ ಜಯ್ಯಮ್ಮ ಹೇಳಿ ಕೂಡಲಿದ್ದಾರೆ. ಈ ಶಿಬಿರದಲ್ಲಿ ಭಾಗವಹಿಸುವುದರ ಮೂಲಕ ತಮ್ಮ ತೂಕವನ್ನು ಹೆಚ್ಚಿಸಿ ಕೊಳ್ಳಬಹುದು ಅಥವಾ ಕಡಿಮೆ ಮಾಡಿಕೊಳ್ಳಬಹುದಾಗಿದೆ. ಈ ಶಿಬಿರದಲ್ಲಿ 10 ರಿಂದ 80 ವರ್ಷ ವಯಸ್ಸಿನವರು ಭಾಗವಹಿಸಬಹುದಾಗಿದೆ ಎಂದಿದ್ದಾರೆ. ಈ ಶಿಬಿರದಲ್ಲಿ ಭಾಗವಹಿಸುವುದರಿಂದ ಮಾನಸಿಕ ಒತ್ತಡ, ಬಿ.ಪಿ. ಸಕ್ಕರೆ ಖಾಯಿಲೆ, ಹೃದಯ ಸಂಬಂಧಿತ ಖಾಯಿಲೆ, ಆಸ್ತಮಾ, ಬೆನ್ನುನೋವು, ಮಂಡಿ ನೋವು ಮೊದಲಾದ ಖಾಯಿಲೆಗಳು ಬಾರದಂತೆ ತಡೆಯಬಹುದಾಗಿದೆ. ಮಕ್ಕಳು ಯೋಗವನ್ನು ಮಾಡುವುದರಿಂದ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆಯಲು ಸಹಕಾರಿಯಾಗಿದೆ ಎಂದಿರುವ ಅವರು, ಈ ಶಿಬಿರದಲ್ಲಿ ವಿಶೇಷ ವೈದ್ಯರಿಂದ ಔಷಧಿ ಮಾತ್ರಗಳಿಲ್ಲದೆ ಹೆಚ್ಚಿನ ಖಾಯಿಲೆಗಳನ್ನು ನಿಯಂತ್ರಿಸುವುದು ತಿಳಿಸಿಕೊಡಲಾಗುವುದು ಎಂದು ತಿಳಿಸಿದ್ದಾರೆ.

### ಹೊಸದುರ್ಗದಲ್ಲಿ 26.4 ಮಿ.ಮೀ ಮಳೆ

» ಚಿತ್ರದುರ್ಗ

ಮಂಗಳವಾರ ಸುರಿದ ಮಳೆ ವಿವರದನ್ವಯ ಜಿಲ್ಲೆಯ ಹೊಸದುರ್ಗದಲ್ಲಿ 26.4 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯ ಅತ್ಯಧಿಕ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಬಾಗೂರಿನಲ್ಲಿ 4.3 ಮಿ.ಮೀ, ಮತ್ತೋಡು 6.3 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 2.4 ಮಿ.ಮೀ, ರಾಮಗಿರಿ 24.4 ಮಿ.ಮೀ ಮಳೆಯಾಗಿದೆ. 24 ಮನೆಗಳು ಭಾಗಶಃ ಹಾನಿ: ಮಂಗಳವಾರ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಒಟ್ಟು 24 ಮನೆಗಳು ಭಾಗಶಃ ಹಾನಿಯಾಗಿದ್ದು, 1 ಸಣ್ಣ ಜಾನುವಾರು ಹಾನಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 17 ಮನೆಗಳು ಭಾಗಶಃ ಹಾನಿಯಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 5 ಮನೆಗಳು ಭಾಗಶಃ ಹಾನಿಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 2 ಮನೆ ಭಾಗಶಃ ಹಾನಿಯಾಗಿದೆ.

# ಮುರುಘಾ ಶರಣರಿಗೆ ಜಾಮೀನು ಮಂಜೂರು, ಬಿಡುಗಡೆ ಭಾಗ್ಯವಿಲ್ಲ

## ಮುರುಘಾ ಮಠಕ್ಕೆ ಶ್ರೀಗಳಿಗಿಲ್ಲ ಪ್ರವೇಶ – 7 ಷರತ್ತು ವಿಧಿಸಿದ ಹೈಕೋರ್ಟ್ –ಕೋರ್ಟ್ ವಶಕ್ಕೆ ಪಾಸ್‌ಪೋರ್ಟ್

### ಮುರುಘಾ ಶ್ರೀಗಳ ಪ್ರಕರಣ ಏನಿದು ನಡೆದಿದ್ದೇನು?

ಚಿತ್ರದುರ್ಗದ ಬೃಹನ್ಮಠದ ಆಡಳಿತದಲ್ಲಿರುವ ವಿದ್ಯಾರ್ಥಿ ನಿಲಯದ ಹಲವು ವಿದ್ಯಾರ್ಥಿನಿಯರ ಮೇಲೆ ಶ್ರೀಗಳು ಲೈಂಗಿಕ ದೌರ್ಜನ್ಯವೆಸಗಿದ್ದಾರೆ ಎಂದು ಆರೋಪಿಸಿ ವಿದ್ಯಾರ್ಥಿನಿಯರು ಮೈಸೂರಿನ ಒಡನಾಡಿ ಸೇವಾ ಸಂಸ್ಥೆಯ ಬಳಿ ಅಳಲನ್ನು ತೋಡಿಕೊಂಡು ತಮ್ಮ ಕಷ್ಟಗಳನ್ನು ಒಡನಾಡಿ ಮುಂದಿರಿಸಲಾಗಿತ್ತು. ಚಿತ್ರದುರ್ಗದ ಮುರುಘಾ ಮಠದ ವಿದ್ಯಾರ್ಥಿ ನಿಲಯದಲ್ಲಿರುವ ನಮ್ಮನ್ನು ಸ್ವಾಮೀಜಿಗಳು ಲೈಂಗಿಕವಾಗಿ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಸ್ವಾಮೀಜಿಯವರಿಗೆ ಹಣ್ಣು ತೆಗೆದುಕೊಂಡು ಹೋಗಿ ಎಂದು ಮಹಿಳಾ ವಾರ್ಡನ್ ಅವರೇ ನಮ್ಮನ್ನು ಕಳುಹಿಸುತ್ತಿದ್ದರು. ಸ್ವಾಮೀಜಿ ಇದ್ದ ಸ್ಥಳಕ್ಕೆ ತೆರಳಿದರೆ ಅಲ್ಲಿ ನಮಗೆ ಮತ್ತು ಮತ್ತೂ ಬರುವಂತೆ ಮಾಡಿ ದುರ್ಬಳಕೆ ಮಾಡಿಕೊಳ್ಳುತ್ತಿದ್ದರು ಎಂದು ಆರೋಪಿಸಿ ಮುರುಘಾ ಶರಣರ ವಿರುದ್ಧ ಮೈಸೂರಿನ ನಜರಾಬಾದ್ ಪೊಲೀಸ್ ಠಾಣೆಯಲ್ಲಿ ಇಬ್ಬರು ವಿದ್ಯಾರ್ಥಿನಿಯಿರಿಂದ ಲೈಂಗಿಕ ದೌರ್ಜನ್ಯ, ಅತ್ಯಾಚಾರ ಪ್ರಕರಣ ದಾಖಲಾಗಿತ್ತು. ಅದಾದ ನಂತರ ಪ್ರಕರಣ ಚಿತ್ರದುರ್ಗಕ್ಕೆ ವರ್ಗಾವಣೆಯಾಗಿದ್ದು ಬಳಿಕ ಪೋಕ್ಸೋ ಪ್ರಕರಣದಡಿಯಲ್ಲಿ ಮುರುಘಾ ಶರಣರನ್ನು 2022ರ ಸೆಪ್ಟೆಂಬರ್ 1ರಂದು ಪೊಲೀಸರು ಬಂಧಿಸಿದ್ದರು.



### ಪ್ರಕರಣದ ಬೆಳವಣಿಗೆಗಳು

ಮೊದಲ ಪ್ರಕರಣದಲ್ಲಿ 2022ರ ಆಗಸ್ಟ್ 26ಕ್ಕೆ ಮೈಸೂರಿನ ನಜರಾಬಾದ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಮಠದ ಹಾಸ್ಟೆಲ್‌ನಲ್ಲಿದ್ದ ಇಬ್ಬರು ಬಾಲಕಿಯರಿಂದ ದೂರು ದಾಖಲಾಗಿತ್ತು. 2022ರ ಆಗಸ್ಟ್ 27ರಂದು ಪ್ರಕರಣ ಚಿತ್ರದುರ್ಗಕ್ಕೆ ವರ್ಗಾವಣೆಯಾಗಿತ್ತು. ಚಿತ್ರದುರ್ಗದ ಗ್ರಾಮಾಂತರ ಪೊಲೀಸ್ ಠಾಣೆಗೆ ವರ್ಗಾವಣೆ ಆಗಿತ್ತು.

### ಯಾವ ಪ್ರಕರಣದಲ್ಲಿ ಜಾಮೀನು ?

ನಜರಾಬಾದ್‌ನ 2 ಪ್ರಕರಣದಲ್ಲಿ 2 ಕೇಸ್ ದಾಖಲಾಗಿತ್ತು. 2 ಪ್ರಕರಣಕ್ಕೆ ಸಂಭಂಧಿಸಿದಂತೆ 1 ಎಫ್‌ಐಆರ್ ದಾಖಲಾಗಿತ್ತು. ಈ ಪ್ರಕರಣದಲ್ಲಿ ಮುರುಘ ಶ್ರೀಗೆ ಜಾಮೀನು ಸಿಕ್ಕಿದೆ ಎಂದು ಸಂತ್ರಸ್ತೆ ಪರ ವಕೀಲ ಶ್ರೀನಿವಾಸ್ ಮಾಹಿತಿ ನೀಡಿದ್ದಾರೆ. ಮೈಸೂರಿನಲ್ಲಿ ದಾಖಲಾಗಿದ್ದ ಈ ಕೇಸ್ ಚಿತ್ರದುರ್ಗಕ್ಕೆ ವರ್ಗಾವಣೆ ಆಗಿತ್ತು. 2022ರ ಅಕ್ಟೋಬರ್ 13ರಂದು 2ನೇ ಪೋಕ್ಸೋ ಕೇಸ್ ದಾಖಲಾಗಿತ್ತು. ಮೈಸೂರಿನ ನಜರಾಬಾದ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಮಠದ ಅಡುಗೆ ಸಹಾಯಕಿಯಿಂದ ದಾಖಲಾಗಿದ್ದ ದೂರಿನ ಆಧಾರದಲ್ಲಿ ಪ್ರಕರಣ ದಾಖಲಾಗಿತ್ತು.



### 7 ಹೈಕೋರ್ಟ್ ವಿಧಿಸಿರುವ ಷರತ್ತುಗಳು

1 ಪ್ರಕರಣದ ವಿಚಾರಣೆ ಮುಗಿಯುವರೆಗೆ ಚಿತ್ರದುರ್ಗ ಜಿಲ್ಲೆಯ ಪ್ರವೇಶವನ್ನು ಮಾಡಬಾರದು.

2 2 ಲಕ್ಷ ವೈಯಕ್ತಿಕ ಬಾಂಡ್ ನೀಡಬೇಕು

3 2 ಲಕ್ಷ ಮೊತ್ತಕ್ಕೆ ಇಬ್ಬರ ಶ್ಯೂರಿಟಿ ನೀಡಬೇಕು.

4 ಪ್ರಕರಣದಲ್ಲಿನ ಸಾಕ್ಷಿಗಳನ್ನು ಬೆದರಿಸಬಾರದು.

5 ಸಾಕ್ಷ್ಯ ನಾಶಕ್ಕೆ ಯತ್ನಿಸಬಾರದು.

6 ಷರತ್ತು ಬದ್ದ ಜಾಮೀನು ಮಂಜೂರಾಗಿರುವ ಆದೇಶವನ್ನು ದುರ್ಬಳಕೆ ಮಾಡಿಕೊಳ್ಳಬಾರದು.

7 ನ್ಯಾಯಾಲಯ ವಿಧಿಸಿದ ಷರತ್ತು ಉಲ್ಲಂಘಿಸಿದರೆ, ಜಾಮೀನು ತನ್ನಿಂದ ತಾನೇ ರದ್ದಾಗಲಿದೆ ಎಂದು ಆದೇಶದಲ್ಲಿ ತಿಳಿಸಿದೆ

» ಬೆಂಗಳೂರು

ಅಪ್ರಾಪ್ತ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಹಾಗೂ ಅತ್ಯಾಚಾರ ಎಸಗಿದ ಆರೋಪ ಎದುರಿಸುತ್ತಿರುವ ಚಿತ್ರದುರ್ಗದ ಮುರುಘಾ ಮಠದ ಶ್ರೀ ಡಾ. ಶಿವಮೂರ್ತಿ ಮುರುಘಾ ಶರಣರಿಗೆ ಕರ್ನಾಟಕ ಹೈಕೋರ್ಟ್ ಬುಧವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ..

ಆದರೆ ಜಾಮೀನು ಮಂಜೂರು ಮಾಡಿರುವ ಹೈಕೋರ್ಟ್ ಮರುಘಾ ಶ್ರೀಗಳಿಗೆ ಏಳು ಷರತ್ತುಗಳನ್ನು ವಿಧಿಸಿದೆ. ಷರತ್ತುಗಳ ಅನ್ವಯದಂತೆ ಶರಣರು ಚಿತ್ರದುರ್ಗ ಮುರುಘಾ ಮಠಕ್ಕೆ ಶ್ರೀಗಳು ಪ್ರವೇಶಿಸುವಂತಿಲ್ಲ. ಪಾಸ್‌ಪೋರ್ಟ್ ಅನ್ನು ಕೋರ್ಟ್ ವಶಕ್ಕೆ ನೀಡಬೇಕು. ಇಬ್ಬರ ಶ್ಯೂರಿಟಿಗಳನ್ನು ಒದಗಿಸಬೇಕು ಎಂದು ಹೈಕೋರ್ಟ್ ಸೂಚಿಸಿದೆ. ಇಷ್ಟೇ ಅಲ್ಲದೆ, ಕೋರ್ಟ್ ವಿಚಾರಣೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಬೇಕು. ಇಂತಹ ಕೃತ್ಯಗಳನ್ನು ಪುನರಾವರ್ತನೆ ಮಾಡುವಂತಿಲ್ಲ ಎಂದು ಕೋರ್ಟ್ ಸೂಚನೆ ನೀಡಿದೆ. ಆದಾಗ್ಯೂ, ಮುರುಘಾಶ್ರೀ ಬಿಡುಗಡೆ ಸದ್ಯಕ್ಕೆ ಅನುಮಾನವಾಗಿದೆ.

**ಜಾಮೀನು ಸಿಕ್ಕಿದರೂ ಜೈಲಿನಿಂದ ಬಿಡುಗಡೆ ಭಾಗ್ಯವಿಲ್ಲ:** ಜಾಮೀನು ಸಿಕ್ಕಿದರೂ ಸದ್ಯಕ್ಕೆ ಮುರುಘಾ ಶ್ರೀಗಳಿಗೆ ಜೈಲಿನಿಂದ ಬಿಡುಗಡೆ ಸಾಧ್ಯವಿಲ್ಲ. ಏಕೆಂದರೆ ಅವರ ವಿರುದ್ಧ ಎರಡು ಅತ್ಯಾಚಾರ ಪ್ರಕರಣಗಳು ದಾಖಲಾಗಿದ್ದು ಅವುಗಳ ವಿಚಾರಣೆ ನಡೆಯುತ್ತಿದೆ. ಮತ್ತೊಂದು ಪ್ರಕರಣದ ಜಾಮೀನು ಅರ್ಜಿ ವಿಚಾರಣೆ ಬಾಕಿ ಇದ್ದು ಅದರಲ್ಲಿ ಜಾಮೀನು ದೊರೆಯದೆ ಅವರು ಜೈಲಿನಿಂದ ಬಿಡುಗಡೆಯಾಗುವುದು ಕಷ್ಟವಾಗಿದೆ. ಮುರುಘಾ ಶ್ರೀ ವಿರುದ್ಧ ಷಡ್ಯಂತ್ರ ನಡೆಸಿದ ಆರೋಪದ ಮೇಲೆ ಮಠದ ಮಾಜಿ ಆಡಳಿತಾಧಿಕಾರಿ ಎಸ್.ಕೆ ಬಸವರಾಜನ್ ದಂಪತಿ ಮೇಲೆ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ಕೆಲವು ದಿನಗಳ ಹಿಂದಷ್ಟೇ ರದ್ದುಪಡಿಸಿತ್ತು.

## ಪ್ರಮುಖ ಸುದ್ದಿ

### ನರೇಗಾ ನಡಿಗೆ ಸುಸ್ಥಿರ ಕಡೆಗೆ ಜನ ಜಾಗೃತಿ ಜಾಥಾ

# ನರೇಗಾ ಯೋಜನೆ: ಕ್ರಿಯಾ ಯೋಜನೆ ತಯಾರಿ, ಕಾರ್ಮಿಕ ಆಯವ್ಯಯ ಸಿದ್ದಪಡಿಸುವ ಪ್ರಕ್ರಿಯೆ

» ಚಿತ್ರದುರ್ಗ

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 2024–25ರ ಕ್ರಿಯಾ ಯೋಜನಾ ತಯಾರಿ ಮತ್ತು ಕಾರ್ಮಿಕ ಆಯವ್ಯಯ ಸಿದ್ದಪಡಿಸುವ ಪ್ರಕ್ರಿಯೆಗಳು ಚಾಲನೆಯಲ್ಲಿವೆ.

ಕಳೆದ ಒಂದು ತಿಂಗಳಿಂದ ಚಿತ್ರದುರ್ಗ ತಾಲ್ಲೂಕಿನ 38 ಗ್ರಾಮ ಪಂಚಾಯತಿಗಳಲ್ಲಿ ನರೇಗಾ ನಡಿಗೆ ಸುಸ್ಥಿರ ಕಡೆಗೆ ಎಂಬ ಶಿರ್ಷಿಕೆಯಲ್ಲಿ ಗ್ರಾಮಗಳ ಪ್ರತಿ ಮನೆ ಮನೆಗೆ ಭೇಟಿ ನೀಡಿ ಕರಪತ್ರದ ಮೂಲಕ ಮಾಹಿತಿ ನೀಡಿ, ಗ್ರಾಮದ ಗುಂಪುಗಳೊಂದಿಗೆ ಹಾಗೂ ರೈತ ಸಮೂಹಕ್ಕೆ ನರೇಗಾ ಹಕ್ಕು, ಉದ್ಯೋಗ ಬೇಡಿಕೆ, ವೈಯಕ್ತಿಕ ಆಸ್ತಿ ಸೃಜಿಸುವ ಮತ್ತು ಜಲ ಸಂರಕ್ಷಣಾ ಕಾಮಗಾರಿಗಳನ್ನ ಸೃಜಿಸುವ ಮಾಹಿತಿ ಸಂವಹನ ಕಾರ್ಯ ಮಾಡಲಾಗುತ್ತಿದೆ. ಪ್ರತಿ ಗ್ರಾಮೀಣ ಕುಟುಂಬಕ್ಕೆ ನೂರು ದಿವಸಗಳ ಕಾಲ ಕೆಲಸವಿದ್ದು, ತಮ್ಮ ವೈಯಕ್ತಿಕ ಆಸ್ತಿ ಸೃಜಿಸುವ ಸ್ವಚ್ಛತೆಗೆ ಬಚ್ಚಲು ಗುಂಡಿ ನಿರ್ಮಿಸಿಕೊಳ್ಳುವ, ದನದ ಕೊಟ್ಟಿಗೆ ನಿರ್ಮಾಣ, ಕಳೆದ ಎರಡು ವರ್ಷಗಳಲ್ಲಿ ನರೇಗಾದಡಿ ಕೊಟ್ಟಿಗೆ ನಿರ್ಮಿಸಿಕೊಂಡಿದ್ದಲ್ಲಿ ತಮ್ಮ ಜಮೀನಿನಲ್ಲಿ ಅರ್ಧದಿಂದ ಒಂದು ಎಕರೆ ಮೇವು ಅಭಿವೃದ್ಧಿಗೆ ಅವಕಾಶ, ಕುರಿ ಮತ್ತು ಕೋಳಿ ಶಡ್ ನಿರ್ಮಿಸಿಕೊಳ್ಳುವ ಹಾಗೆ ಕೃಷಿ ಭೂಮಿಯಲ್ಲಿ ಬಿದ್ದ ಮಳೆ ನೀರು ಹಿಡಿದಿಡುವ ಬದು ಕೃಷಿ ಹೊಂಡಗಳ ನಿರ್ಮಾಣ, ಬದುವಿನ ಸುತ್ತ ಕೃಷಿ ಅರಣ್ಯ ಬೆಳೆಯುವ, ನೀರಾವರಿ ಅಥವಾ ಮಳೆ ಆಶ್ರಿತ 69 ತೋಟಗಾರಿಕಾ ಮತ್ತು ರೇಷ್ಮೆ ಬೆಳೆ ಬೆಳೆಯುವ ಕಾಮಗಾರಿಗಳು ಹಾಗೆ ತಮ್ಮ ಗ್ರಾಮಗಳಲ್ಲಿ ಸಮುದಾಯ ಕಾಮಗಾರಿಗಳಾದ ಸಮಗ್ರ ಶಾಲಾ ಅಭಿವೃದ್ಧಿ, ಸ್ವಸಹಾಯ ಸಂಘದ ಮಹಿಳೆಯರಿಗೆ ಸಂಜೀವಿನಿ ಶಡ್ ನಿರ್ಮಾಣ ಮುಂತಾದ ಸ್ಥಿರ ಆಸ್ತಿ ಸೃಜಿಸುವ ಮತ್ತು ಗ್ರಾಮದ ರಸ್ತೆ ಬದಿ ನಡು ತೋಪು, ಗೋಮಾಳ ಅಭಿವೃದ್ಧಿ, ಕೆರೆ ಗೋಕಟ್ಟೆಗಳ ಸೇರಿದಂತೆ ಜಲ ಮೂಲಗಳ ಅಭಿವೃದ್ಧಿಯಲ್ಲಿ ಪಾಲ್ಗೊಂಡು ಸಮಗ್ರ ಗ್ರಾಮ ಅಭಿವೃದ್ಧಿಗೆ ಕಾರಣರಾಗುತ್ತಾ ದಿನಂಪ್ರತಿ 316 ಕೂಲಿ ಹಣ ಪಡೆದು ಕುಟುಂಬ ಆರ್ಥಿಕತೆ ಸಹ ಸರಿದೂಗಿಸಿಕೊಳ್ಳಬಹುದಾಗಿದೆ.



ಅಲ್ಲದೆ, ಈಗಾಗಲೆ ಗ್ರಾಮಗಳಲ್ಲಿ ಮಹಿಳಾ ಸ್ವಸಹಾಯ ಸಂಘಗಳು ಸಕ್ರಿಯವಾಗಿದ್ದು, ಪ್ರತಿ ಸ್ವಸಹಾಯ ಸಂಘದಲ್ಲಿ 12 ರಿಂದ 15 ಜನರಿದ್ದು, ಸ್ವಸಹಾಯ ಸಂಘಗಳೇ ಕಾಯಕ ಸಂಘಗಳಾಗಿ 20 ರಿಂದ 25 ಜನರ ಗುಂಪುಮಾಡಿಕೊಂಡು ನಮೂನೆ 6/ಅರ್ಜಿಯಲ್ಲಿ ಬೇಡಿಕೆ ಸಲ್ಲಿಸಿ ಉದ್ಯೋಗ ಪಡೆಯಬಹುದಾಗಿದೆ.

ಚಿತ್ರದುರ್ಗ ತಾಲ್ಲೂಕು ಗೋನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2024–25ರ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಕ್ರಿಯಾ ಯೋಜನಾ ತಯಾರಿ ಪ್ರಕ್ರಿಯೆಯ ನರೇಗಾ ನಡಿಗೆ ಸುಸ್ಥಿರ ಕಡೆಗೆ ಜನ ಜಾಗೃತಿ ಜಾಥಾದಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅವರು ಬುಧವಾರ ಭಾಗವಹಿಸಿ ನರೇಗಾ ಮಾಹಿತಿ ಕರಪತ್ರ ನೀಡಿದರು. ವೈಯಕ್ತಿಕ ಆಸ್ತಿ ಸೃಜಿಸಿಕೊಳ್ಳುವ ಮತ್ತು ಗ್ರಾಮದ ಸ್ಥಿರಾಸ್ತಿ ಸೃಜನೆ ಹಾಗೂ ಜಲ ಮೂಲ ಅಭಿವೃದ್ಧಿ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕರೆ ನೀಡಿದರು.

ಈ ಸಂದಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೆ.ತಿಮ್ಮಯ್ಯ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಹೆಚ್. ಹನುಮತಪ್ಪ, ಎಡಿಪಿಸಿ ಮೋಹನ್, ಡಿಐಇಸಿ ರವೀಂದ್ರ,ನರೇಗಾಸಹಾಯಕನಿರ್ದೇಶಕರಾದ ಮರಿಸ್ವಾಮಿ ಭಾಗವಹಿಸಿದ್ದರು.




## ಫಾಸ್ಟ್ ನ್ಯೂಸ್

### ಹೃದಯ ಆರೋಗ್ಯ ತಪಾಸಣಾ ಶಿಬಿರ

» ಚಿತ್ರದುರ್ಗ

ಜಿಲ್ಲಾ ವೀರಶೈವ ಲಿಂಗಾಯತ ಹೇಮರೆಡ್ಡಿ ಮಲ್ಲಮ್ಮ ಸಮಾಜ ಮತ್ತು ದಾವಣಗೆರೆಯ ಎಸ್.ಎಸ್. ನಾರಾಯಣ ಆಸ್ಪತ್ರೆ ಇವರ ಸಹಯೋಗದೊಂದಿಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದ ಬಳಿಯಲ್ಲಿನ ಚಿತ್ರದುರ್ಗ ಇನ್ಸಿಟ್ಯೂಟ್ ಆವರಣದಲ್ಲಿನ ಹೇಮರೆಡ್ಡಿ ಮಲ್ಲಮ್ಮ ಸಮಾಜದ ಸಭಾಂಗಣದಲ್ಲಿ ನ. 11ರ ಶನಿವಾರ ಉಚಿತ ಹೃದಯ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮಾಜದ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪರವರು ತಿಳಿಸಿದ್ದಾರೆ. ಅಂದು ಬೆಳಿಗ್ಗೆ 10 ರಿಂದ ಮದ್ಯಾಹ್ನ 2ರವರೆಗೆ ನಡೆಯಲಿದ್ದು, ಈ ಶಿಬಿರದಲ್ಲಿ ದಾವಣಗೆರೆಯ ಎಸ್.ಎಸ್. ನಾರಾಯಣ ಆಸ್ಪತ್ರೆಯ ವೈದ್ಯರಿಂದ ಹೃದಯ ತಪಾಸಣೆ ಇ.ಸಿ.ಜಿ. ಮತ್ತು ಎಕೋ ಪರೀಕ್ಷೆಗಳನ್ನು ಉಚಿತವಾಗಿ ನಡೆಸಲಾಗುವುದು. ನಗರದ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆಯುವಂತೆ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 9448423229, 8762112015, 9980026026 ಇವರನ್ನು ಸಂಪರ್ಕ ಮಾಡಬಹುದಾಗಿದೆ.

### ಶಿವಲಿಂಗಾನಂದ ಶ್ರೀಗಳ ಜನ್ಮದಿನ

» ಚಿತ್ರದುರ್ಗ



ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿನ ಶ್ರೀ ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳ ಜನ್ಮ ದಿನವನ್ನು ನ. 9 ರ ಸಂಜೆ 7 ಗಂಟೆಗೆ ಶ್ರೀ ಮಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಠದ ಭಕ್ತಾಧಿಗಳಾದ ಗಣಪತಿ ಶಾಸ್ತ್ರಿ ತಿಳಿಸಿದ್ದಾರೆ. ನಗರದ ಕಬೀರಾನಂದಾಶ್ರಮಕ್ಕೆ ಮಠಾಧೀಪತಿಗಳಾದ ಬಂದ ಮೇಲೆ ವಿವಿಧ ರೀತಿಯ ಸಮಾಜ ಸೇವೆಯನ್ನು ಮಾಡುತ್ತಾ ಶಿಕ್ಷಣ ವೃದ್ದಾಶ್ರಮ, ವಿಕಲ ಚೇತನರಿಗೆ ಸಹಾಯವನ್ನು ಮಾಡುತ್ತಾ ಆಶ್ರಮವನ್ನು ಮುನ್ನಡೆಸುತ್ತಿದ್ದಾರೆ. ಭಕ್ತಾಧಿಗಳು ಈ ಕಾರ್ಯಕ್ರಮಕ್ಕೆ ಆಗಮಿಸುವುದರ ಮೂಲಕ ಶ್ರೀಗಳ ಕೃಪೆಗೆ ಪಾತ್ರರಾಗುವಂತೆ ಮನವಿ ಮಾಡಿದ್ದಾರೆ.

### ರೈತರು ಗುರುತಿನ ಚೀಟಿ ಮಾಡಿಸಿಕೊಳ್ಳಲು ಕರೆ

» ಚನ್ನಗಿರಿ

ರೈತರು ತಮ್ಮ ಗುರುತಿನ ಚೀಟಿ ಮಾಡಿಸಿಕೊಳ್ಳಬೇಕೆಂದು ಶಾಸಕ ಬಸವರಾಜು ವಿಶಿವಗಂಗಾ ರೈತರಿಗೆ ಕರೆ ನೀಡಿದ್ದಾರೆ. ಈಗಾಗಲೇ ಗುರುತಿನ ಚೀಟಿ ಮಾಡಿಸಿಕೊಂಡಿದ್ದ ರೈತರು ಹೊಲದ ಸರ್ವೇ ನಂಬರ್ ಜೋಡಣೆ ಆಗಿದಿಯಾ ಅಥವಾ ಇಲ್ಲವೋ ಎಂಬುದನ್ನ ಪರಿಶೀಲಿಸಿಕೊಳ್ಳಬೇಕು. ಇಲ್ಲವಾದರೆ ಕೂಡಲೇ ಹೊಲದ ಸರ್ವೇ ನಂಬರ್ ಜೋಡಣೆ ಮಾಡಿಸಿಕೊಳ್ಳಬೇಕೆಂದು ತಿಳಿಸಿದ್ದಾರೆ. ಜಂಟಿ ಖಾತೆ ಹೊಂದಿದ್ದರೆ ಪ್ರತ್ಯೇಕವಾಗಿ ಗುರುತಿನ ಚೀಟಿ ಮಾಡಿಸಿಕೊಳ್ಳಲು ಸಲಹೆ ನೀಡಿದ್ದಾರೆ. ಇದಕ್ಕೆ ಆಧಾರ್ ಕಾರ್ಡ್, ಪಹಣಿ, ಬ್ಯಾಂಕ್ ಪಾಸ್ ಬುಕ್ ಮೊಬೈಲ್ ನಂಬರ್ ಹಾಗೂ ಇತ್ತೀಚಿನ ಭಾವಚಿತ್ರ ಗುರುತಿನ ಚೀಟಿ ಮಾಡಿಸಲು ದಾಖಲೆ ಬೇಕಾಗುತ್ತದೆ, ಹೆಚ್ಚಿನ ಮಾಹಿತಿಗಾಗಿ ಗ್ರಾಮ ಆಡಳಿತಾಧಿಕಾರಿಗಳು ಮತ್ತು ರೈತ ಸಂಪರ್ಕ ಕೇಂದ್ರದಲ್ಲಿ ಮಾಹಿತಿ ಪಡೆದುಕೊಳ್ಳಬಹುದೆಂದು ತಿಳಿಸಿದ್ದಾರೆ. ಗುರುತಿನ ಚೀಟಿ ಇಲ್ಲದಿದ್ದರೆ ಸರ್ಕಾರದಿಂದ ಯೋಜನೆ ಹಾಗೂ ಹಣ ಖಾತೆಗೆ ಜಮಾ ಆಗುವುದಿಲ್ಲ, ಎಲ್ಲಾ ರೈತರು ಗುರುತಿನ ಚೀಟಿ ಮಾಡಿಸಿಕೊಳ್ಳಿ ಎಂದು ಹೇಳಿದ್ದಾರೆ.

### ಕನ್ನಡ ರಾಜ್ಯೋತ್ಸವ-ಯೋಗ ಉತ್ಸವ

» ಚಿತ್ರದುರ್ಗ

ಪಜಂತಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್, ಮಹಿಳಾ ಪತಂಜಲಿ ಯೋಗ ಸಮಿತಿ, ಯುವ ಭಾರತ್, ಪತಂಜಲಿ ಕಿಸಾನ್ ಸೇವಾ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ–ಯೋಗ ಉತ್ಸವ ಅಂಗವಾಗಿ 25 ದಿನಗಳ ಉಚಿತ ಯೋಗ, ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ ಶಿಬಿರವನ್ನು ಇದೇ ನವೆಂಬರ್ 10 ರಿಂದ ಡಿಸೆಂಬರ್ 4ರವರೆಗೆ ಬೆಳಿಗ್ಗ 5.30 ರಿಂದ 7 ರವರೆಗೆ ನಗರದ ಹೊಳಲ್ಕೆರೆ ರಸ್ತೆಯ ಶ್ರೀ ಬರಗೇರಮ್ಮ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ನ.10ರಂದು ಬೆಳಿಗ್ಗ 5.30 ರಿಂದ 7 ರವರೆಗೆ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಮಹಿಳಾ ಪತಂಜಲಿ ಯೋಗ ಸಮಿತಿ ಮಾಜಿ ಅಧ್ಯಕ್ಷೆ ರೇಣುಕಾ ಉಮೇಶ್ ಉದ್ಘಾಟಿಸುವರು. ಬರಗೇರಮ್ಮ ಮಹಿಳಾ ಪತಂಜಲಿ ಯೋಗ ಸಮಿತಿ ಅಧ್ಯಕ್ಷೆ ಎಸ್.ನಾಗಮ್ಮ ಅಧ್ಯಕ್ಷತೆ ವಹಿಸುವರು.

ಯೋಗ ಶಿಕ್ಷಕರಾದ ಟಿ.ಕೃಷ್ಣಮೂರ್ತಿ, ಎಲ್.ಲತಾ, ರಾಮ್‌ನರೇಶ್, ಎಸ್.ನಾಗಮ್ಮ, ಕೆ.ರಾಮರಾಜ್, ಟಿ.ಕೆ.ಸುಮಲತಾ, ಎಸ್.ಜಯಮ್ಮ ಶಿಬಿರ ನಡೆಸಿಕೊಡುವರು.

ಶಿಬಿರಾರ್ಥಿಗಳು ಯೋಗ ತರಬೇತಿಗೆ ಯೋಗ ಮ್ಯಾಟ್ ಅಥವಾ ಜಮಾಖಾನದೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಟಿ.ಕೃಷ್ಣಮೂರ್ತಿ–8453462044, ಬಿ.ಹೆಚ್. ರೇಣುಕಮ್ಮ–9880280715ಗೆಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಮಾಹಿತಿ

# ಜಿಲ್ಲಾ ಆಸ್ಪತ್ರೆ ವೈದ್ಯರಿಗೆ ಹಣ ನೀಡಬೇಡಿ

» ಚಿತ್ರದುರ್ಗ

ರೋಗಿಗಳಿಗೆ ಉತ್ತಮ ಆರೋಗ್ಯ ಸೇವೆ ನೀಡುವಲ್ಲಿ ಜಿಲ್ಲಾ ಆಸ್ಪತ್ರೆಯ ಎಲ್ಲಾ ವಿಭಾಗಗಳಲ್ಲಿಯೂ ತಜ್ಞ ವೈದ್ಯರು ಹಾಗೂ ಸಿಬ್ಬಂದಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ, ಔಷಧಿ ಪೂರೈಕೆ ಹಾಗೂ ಚಿಕಿತ್ಸಾ ಸೇವೆ ಕುರಿತು ಯಾವುದೇ ಸಮಸ್ಯೆಗಳಿದ್ದಲ್ಲಿ, ಸಾರ್ವಜನಿಕರು ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ದೂರು ಸಲ್ಲಿಸಬಹುದು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಹೇಳಿದರು.

ನಗರದ ಜಿಲ್ಲಾ ಆಸ್ಪತ್ರೆ ಆವರಣದ ಬಿ.ಸಿ.ರಾಯ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಆಸ್ಪತ್ರೆಯಲ್ಲಿಕೈಗೊಂಡಿರುವಅಭಿವೃದ್ಧಿ ಕಾರ್ಯಗಳ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರು ಆಸ್ಪತ್ರೆಗೆ ಭೇಟಿ ನೀಡುವಾಗ ಕಡ್ಡಾಯವಾಗಿ ಆಧಾರ್ ಕಾರ್ಡ್, ಪಡಿತರ ಚೀಟಿ ತರಬೇಕು. ಆಯುಷ್ಮಾನ್, ಎಬಿಎಆರ್‌ಕೆ ಅಡಿಯಲ್ಲಿ ಆಸ್ಪತ್ರೆಗೆ ದಾಖಲು ಮಾಡಲು ಅನುಕೂಲವಾಗಲಿದೆ ಎಂದು ತಿಳಿಸಿದ ಅವರು, ಯಾವುದೇ ಕಾರಣಕ್ಕೂ ವೈದ್ಯರಿಗೆ ಹಾಗೂ ಶುಶ್ರೂಷಕರಿಗೆ ಹಣ ನೀಡಬಾರದು. ಯಾವುದೇ ದೂರಗಳಿದ್ದರೆ ತಕ್ಷಣ ನನ್ನ ಗಮನಕ್ಕೆ ತರಬೇಕು ಎಂದು ಸಾರ್ವಜನಿಕರಿಗೆ ಮನವಿ ಮಾಡಿದರು.

ಬೆಳಿಗ್ಗೆ 9 ಗಂಟೆಯೊಳಗೆ ರೋಗಿಗಳ ಭೇಟಿ ಮಾಡಿ: ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳನ್ನು ಬೆಳಿಗ್ಗೆ 9 ಗಂಟೆಯೊಳಗೆ ಭೇಟಿ ಮಾಡಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಸಾರ್ವಜನಿಕರಿಗೆ ಮನವಿ ಮಾಡಿದರು.

ಒಂದು ವಾರ್ಡ್‌ನಲ್ಲಿ 20 ರಿಂದ 25 ರೋಗಿಗಳು ಇರುತ್ತಾರೆ. ಒಬ್ಬ ರೋಗಿ ಜತೆಗೆ ನಾಲ್ಕೈದು ಜನರು ಇರುತ್ತಾರೆ. ಇದರಿಂದ ದೈನಂದಿನ ಕರ್ತವ್ಯಕ್ಕೆ ಬಹಳ ತೊಂದರೆ ಆಗುತ್ತಿದೆ. ಹಾಗಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳನ್ನು ಬೆಳಿಗ್ಗೆ 9 ಗಂಟೆಯೊಳಗೆ ಭೇಟಿ ಮಾಡಬೇಕು. ಇದರಿಂದ ವೈದ್ಯರು ರೌಂಡ್ಸ್ ಹಾಗೂ ಚಿಕಿತ್ಸೆ ಮಾಡಲು ಅನುಕೂಲವಾಗಲಿದೆ ಜೊತೆಗೆ ಸ್ವಚ್ಛತೆ ಕಾಪಾಡಲು ಸಾಧ್ಯವಾಗಲಿದೆ. ಮಧ್ಯಾಹ್ನ 12 ರಿಂದ 2 ರವರೆಗೆ ಊಟದ ಸಮಯದಲ್ಲಿ ರೋಗಿಗಳನ್ನು ಭೇಟಿ ಆಗಬಹುದು. ಮಧ್ಯಾಹ್ನ 2 ರಿಂದ 4 ರವರೆಗೆ ರೋಗಿಗಳಿಗೆ ವಿಶ್ರಾಂತಿಗೆ ಅವಕಾಶ ಮಾಡಿಕೊಡಬೇಕು. ಇದರಿಂದ ರೋಗಿಗಳು ಬೇಗ ಗುಣಮುಖವಾಗಲಿದ್ದಾರೆ ಎಂದರು. ಜಿಲ್ಲಾ ಆಸ್ಪತ್ರೆಯಲ್ಲಿ ಜನರಲ್ ಸರ್ಜರಿ, ಜನರಲ್ ಮೆಡಿಸಿನ್, ಒಬಿಜಿ, ಪಿಡಿಯಾಟ್ರಿಕ್ಸ್, ತುರ್ತು ಚಿಕಿತ್ಸಾ ವಿಭಾಗ, ಅನಸ್ತೇಶಿಯಾ, ಕಣ್ಣಿನ ವಿಭಾಗ, ಕೀಲು



ಮತ್ತು ಮೂಳೆ ವಿಭಾಗ, ರಕ್ತನಿಧಿ ಕೇಂದ್ರ, ಜಿಎನ್‌ಎಂ, ಬಿಎಸ್ಸಿ ನರ್ಸಿಂಗ್, ಪ್ಯಾರಾ ಮೆಡಿಕಲ್ ಕಾಲೇಜು ಸೇರಿದಂತೆ ಒಟ್ಟು 33 ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ. ಎಲ್ಲ ತಜ್ಞವೈದ್ಯರು ಕಾರ್ಯನಿರ್ವಹಿಸುತ್ತಿದ್ದು, ಯಾವುದೇ ಖಾಲಿ ಹುದ್ದೆಗಳು ಇಲ್ಲ. ತುರ್ತು ಚಿಕಿತ್ಸಾ ವಿಭಾಗದಲ್ಲಿ ಮಾತ್ರ 7 ಹುದ್ದೆಗಳು ಖಾಲಿ ಇವೆ. ಗ್ರೂಪ್ ಡಿ ಮತ್ತು ಶುಶ್ರೂಷಕರು ತಲಾ 25 ಹುದ್ದೆಗಳ ಖಾಲಿ ಇವೆ ಎಂದು ಹೇಳಿದರು. ಜಿಲ್ಲಾಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯಾಗಿದ್ದು, ಇದಕ್ಕೆ ಅನುಗುಣವಾಗಿ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ. ಕಾಲಕ್ರಮೇಣ ಇದನ್ನು 450 ಹಾಸಿಗೆ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಗಿದೆ. ಆದರೆ ಇದಕ್ಕೆ ತಕ್ಕಂತೆ ಸಿಬ್ಬಂದಿಯನ್ನು ಇನ್ನೂ ನಿಯೋಜನೆ ಮಾಡಿಲ್ಲ. ಹಾಗಾಗಿ ಈಚೆಗೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾಸ್ಪತ್ರೆಯ ಸಾಮಾನ್ಯ ಸಭೆಯಲ್ಲಿ ಒಪ್ಪಿಗೆ ನೀಡಿದ್ದು, 450 ಹಾಸಿಗೆ ಸಾಮರ್ಥ್ಯಕ್ಕೆ ತಕ್ಕಂತೆ ಸಿಬ್ಬಂದಿ ನಿಯೋಜನೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲು ಕ್ರಮವಹಿಸಲಾಗಿದೆ ಎಂದರು.ಕಳೆದ ಒಂದು ತಿಂಗಳ ಅವಧಿಯಲ್ಲಿ 32,823 ಜನರು ಹೊರರೋಗಿಗಳಾಗಿ ಚಿಕಿತ್ಸೆ ಪಡೆದಿದ್ದಾರೆ. 5357 ಜನರು ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದಾರೆ. ಜಿಲ್ಲಾಸ್ಪತ್ರೆಯ ಸಿ.ಟಿ ಸ್ಕ್ಯಾನ್ ವಿಭಾಗದಲ್ಲಿ 459 ಸಿಟಿ ಸ್ಕ್ಯಾನ್ ಮಾಡಲಾಗಿದೆ. ಎಬಿಎಆರ್‌ಕೆ ಅಡಿಯಲ್ಲಿ ಬರುವ ಸ್ಕ್ಯಾನ್‌ಗಳನ್ನು ಉಚಿತವಾಗಿ ಸೌಲಭ್ಯ ನೀಡಲಾಗುವುದು. 1604 ಜನರನ್ನು ಎಬಿಎಆರ್‌ಕೆ ಅಡಿಯಲ್ಲಿ ಆಸ್ಪತ್ರೆಯಲ್ಲಿ ದಾಖಲು ಮಾಡಿಕೊಳ್ಳಲಾಗಿದೆ. ಇದರಲ್ಲಿ ಎಬಿಎಆರ್‌ಕೆ ಅಡಿಯಲ್ಲಿ ರೋಗಿಗಳನ್ನು ದಾಖಲು ಮಾಡಿದರೆ ಸರ್ಕಾರದ ಹಣ ಬರಲಿದೆ. 2500 ರೋಗಿಗಳಿಗೆ ಎಂಆರ್‌ಐ ಸ್ಕ್ಯಾನ್ ಮಾಡಲಾಗಿದೆ. ಎಂಆರ್‌ಐಗೆ ಜಿಲ್ಲೆ ಮಾತ್ರವಲ್ಲದೇ ಶಿವಮೊಗ್ಗ, ಚಿಕ್ಕಮಗಳೂರು, ವಿಜಯನಗರ ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳಿಗೆ ಎಂಆರ್‌ಐ ಸೌಲಭ್ಯ ನೀಡಲಾಗುತ್ತಿದೆ. 170 ಜನರಲ್ ಸರ್ಜರಿ, 30 ಪ್ರಕರಣ ಸಣ್ಣಪುಟ್ಟ ಆಪರೇಷನ್ ಮಾಡಲಾಗಿದೆ. 122 ಮೂಳೆ ಮುರಿತದ ಆಪರೇಷನ್ ಮಾಡಲಾಗಿದ್ದು, ಮೂಳೆ ಮುರಿತದ ಆಪರೇಷನ್‌ನಲ್ಲಿ ರಾಜ್ಯದಲ್ಲಿಯೇ ಮೂರನೇ ಸ್ಥಾನದಲ್ಲಿದೆ. ರಕ್ತನಿಧಿ ಕೇಂದ್ರದಲ್ಲಿ 530 ಯೂನಿಟ್ ಬ್ಲಡ್ ಸಂಗ್ರಹಿಸಿ 439 ಯುನಿಟ್ ಜನರಿಗೆ ವಿತರಣೆ ಮಾಡಲಾಗಿದೆ. ಜಿಲ್ಲಾಸ್ಪತ್ರೆಯಲ್ಲಿ 653 ಹೆರಿಗೆ ಆಗಿವೆ. 189 ನಾರ್ಮಲ್ ಹಾಗೂ 464 ಸಿಜೇರಿಯನ್ ಹೆರಿಗೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ವಿವಿಧ ಕಾರಣಗಳಿಗಾಗಿ ಅಪಾಯ ಸ್ಥಿತಿಯಲ್ಲಿನ ಸುಮಾರು 250 ಕ್ಕೂ ಹೆಚ್ಚು ಶಿಶುಗಳ ಜೀವ ರಕ್ಷಿಸಲಾಗಿದೆ ಎಂದರು.ಕಳೆದ ತಿಂಗಳು ಹಾವು ಕಚ್ಚಿದ ಪ್ರಕರಣಗಳು 52 ಬಂದಿದ್ದು, ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ವಿಷ ಸೇವಿಸಿದ 133 ಪ್ರಕರಣಗಳಲ್ಲಿ ತಡವಾಗಿ ಬಂದ ಒಂದು ಪ್ರಕರಣ ಡೆತ್ ಆಗಿದೆ ಎಂದರು.

ಬರುವ ದಿನಗಳಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಇನ್ನಷ್ಟು ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ನೀಡಲು ಸಂಕಲ್ಪ ಕೈಗೊಳ್ಳಲಾಗಿದ್ದು, ವಾರಕ್ಕೊಮ್ಮೆ ಸಿಬ್ಬಂದಿ ಹಾಗೂ ಸಾರ್ವಜನಿಕರೊಂದಿಗೆ ಸಮಾಲೋಚನೆ ನಡೆಸಲು ಕೂಡ ನಿರ್ಧರಿಸಲಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಉತ್ತಮ ಆರೋಗ್ಯ ಸೇವೆ ನೀಡಲು ಹಾಗೂ ಸ್ವಚ್ಛತೆಯಲ್ಲಿಯೂ ಕೂಡ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ರವೀಂದ್ರ ಮನವಿ ಮಾಡಿದರು.

## ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧಾ ಕಾರ್ಯಕ್ರಮ





» ಚಿತ್ರದುರ್ಗ

ನಗರದ ನಗರ ಕೇಂದ್ರ ಗ್ರಂಥಾಲಯ ಆವರಣದಲ್ಲಿ ಬುಧವಾರ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಅಂಗವಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ಚಿತ್ರಕಲಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ ನಡೆಯಿತು.

ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳು ಕೈಯಲ್ಲಿ ಕುಂಚ ಹಿಡಿದು ಪ್ರಕೃತಿ, ಸೂರ್ಯ, ಚಿಟ್ಟೆಗಳು, ಕಾಮನಬಿಲ್ಲು, ಪ್ರಾಣಿ, ಪಕ್ಷಿಗಳು, ಬೆಟ್ಟ–ಗುಡ್ಡ ಚಿತ್ರ ಹೀಗೆ ನಮ್ಮ ಪರಿಸರ ಎಂಬ ವಿಷಯದ ಕುರಿತು ತಮ್ಮ ಪ್ರತಿಭೆಗೆ ಅನುಗುಣವಾಗಿ ಚಿತ್ರ ಬರೆದರು. ಸ್ಥಳದಲ್ಲಿಯೇ ಚಿತ್ರ ಬರೆಯುವ ಸ್ಪರ್ಧೆಯಲ್ಲಿ ಚಿತ್ರದುರ್ಗ ನಗರ ವ್ಯಾಪ್ತಿಯ ವಿವಿಧ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸಾರ್ವಜನಿಕ ಗ್ರಂಥಾಲಯ ಮಹತ್ವ ಕುರಿತಂತೆ ಹಾಗೂ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ನಮ್ಮ ತರಾಸು ಜೀವನ ಚರಿತ್ರೆ ಕುರಿತಂತೆ ಪ್ರಬಂಧ ಸ್ಪರ್ಧೆ ನಡೆಯಿತು.

ಈ ಸಂದರ್ಭದಲ್ಲಿ ನಗರದ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ್, ಸಹ ಗ್ರಂಥಪಾಲಕ ಮೋಹನ್ ದಾಸ್, ದ್ವಿತೀಯ ದರ್ಜೆ ಸಹಾಯಕ ಮಹೇಶ್ ಬಾರೆಕರ, ಸಿಬ್ಬಂದಿಗಳಾದ ಮೀನಾಕ್ಷಮ್ಮ, ಗೌರಮ್ಮ ಸೇದಂತೆ ವಿವಿಧ ಶಾಲೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಮೇವು ಶೇಖರಣೆಗೆ ರೈತರಲ್ಲಿ ಮನವಿ

» ದಾವಣಗೆರೆ

ಈ ವರ್ಷ ಮಳೆ ಕೊರತೆಯಿಂದ ದಾವಣಗೆರೆ ಜಿಲ್ಲೆಯ 6 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿರುವ ಹಿನ್ನಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗುವ ಸಾಧ್ಯತೆಗಳಿದ್ದು, ಭತ್ತ, ಮೆಕ್ಕೆಜೋಳ ಮತ್ತು ಇತರೆ ಬೆಳೆಗಳ ಕಟಾವು ಮಾಡುವ ವೇಳೆ ಮೇವು ಮೇವು ಹಾಳಾಗದಂತೆ ಶೇಖರಣೆ ಮಾಡಿಟ್ಟುಕೊಳ್ಳಲು ಜಿಲ್ಲೆಯಲ್ಲಿ ಕ್ರಮವಹಿಸುವಂತೆ ರೈತರಿಗೆ ಜಿಲ್ಲಾಧಿಕಾರಿ. ಡಾ.ವೆಂಕಟೇಶ್.ಎಂ.ವಿ ಮನವಿ ಮಾಡಿದ್ದಾರೆ. ವಾಡಿಕೆ ಮಳೆಗಿಂತ ತೀವ್ರತರ ಕಡಿಮೆ ಮಳೆಯಾಗಿ ಬರ ಉಂಟಾಗಿದೆ. ಈ ಸಂಕಷ್ಟ ಪರಿಸ್ಥಿತಿಯಲ್ಲಿ ಜಾನುವಾರುಗಳಿಗೆ ಮೇವು ಒದಗಿಸುವುದು ಪ್ರಮುಖ ವಿಷಯವಾಗಿದೆ. ರೈತರು ತಮ್ಮ ಜಮೀನಿಲ್ಲಿರುವ ಯಾವುದೇ ತರಹದ ಮೇವನ್ನು ಸುಟ್ಟು ಹಾಕದೇ ಬಣವೆ ಹಾಕಿ ಶೇಖರಿಸಬೇಕು. ಮೇವನ್ನು ಒಣಗಿಸಿ ಹುಲ್ಲು ಹಾಳಾಗದಂತೆ ಶೇಖರಣೆ ಮಾಡುವುದು. ಬೇಲಿಂಗ್ ಯಂತ್ರಗಳಿಂದ ಭತ್ತದ ಹುಲ್ಲು ಸುರುಳಿ ಕಟ್ಟಿ ಶೇಖರಿಸಿಟ್ಟುಕೊಳ್ಳಬೇಕು. ಅವಶ್ಯಕ ಸಂದರ್ಭದಲ್ಲಿ ರೈತರು ಸರ್ಕಾರಕ್ಕೆ ಮೇವನ್ನು ಮಾರಾಟ ಮಾಡಬಹುದು ಎಂದು ಅವರು ತಿಳಿಸಿದ್ದಾರೆ.

## ಹರಿಹರ ನಗರಸಭೆಯಿಂದ ವಿವಿಧ ಯೋಜನೆಗಳಿಗೆ ಸಾಲ ಸೌಲಭ್ಯ

» ದಾವಣಗೆರೆ

ದೀನ ದಯಾಳ್ ಅಂತ್ಯೋದಯ ಯೋಜನೆ–ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಯೋಜನೆಯಡಿ ಪ್ರಸಕ್ತ ಸಾಲಿನ ವಿವಿಧ ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿದಾರರು ಹರಿಹರ ನಗರವಾಸಿಯಾಗಿರಬೇಕು, ಬಿ.ಪಿ.ಎಲ್ ಪಡಿತರ ಚೀಟಿಯನ್ನು ಹೊಂದಿರಬೇಕು. ಹರಿಹರ ನಗರ ಸಭೆ ಕಚೇರಿಯಲ್ಲಿ ಅರ್ಜಿ ನಮೂನೆ ಪಡೆದು ಅಗತ್ಯ ದಾಖಲೆಗಳೊಂದಿಗೆ ಡಿಸೆಂಬರ್ 2ರ ಒಳಗಾಗಿ ಅದೇ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹರಿಹರ ನಗರ ಸಭೆಯ ಸಂಬಂಧಿತ ಶಾಖೆಯನ್ನು ಭೇಟಿ ಮಾಡಲು ಪೌರಾಯುಕ್ತರಾದ ಬಸವರಾಜ ತಿಳಿಸಿದ್ದಾರೆ.

## ಶ್ರೀ ಮಾರಿಕಾಂಭ ದೇವಿ ಅಮ್ಮನವರ ನೂತನ ರಥ ಉದ್ಘಾಟನೆ ನಾಳೆ

» ಚಿತ್ರದುರ್ಗ

ತಾಲೂಕಿನ ಇಂಗಳದಾಳ್ ಗ್ರಾಮದ ಶ್ರೀ ಮಾರಿಕಾಂಭ ದೇವಿ ಅಮ್ಮನವರ ನೂತನ ರಥ (ಉಚ್ಚಯ)ವನ್ನು ಉದ್ಘಾಟನೆ ಕಾರ್ಯಕ್ರಮ ದಿನಾಂಕ–10–11–2023 ರ ಶುಕ್ರವಾರದಂದು ಹಮ್ಮಿಕೊಳ್ಳಲಾಗಿದೆ. ಶುಕ್ರವಾರ ಬೆಳಗ್ಗೆ 11–45 ರಿಂದ 1 ಗಂಟೆವರೆಗೆ ನೂತನ ರಥ ಶುದ್ಧಿ ಪೂಜಾ ವಿಧಿ ವಿಧಾನ ನೇವವೇರಿಸಲಾಗುತ್ತದೆ. ಅಂದು ಗಣಪತಿ ಪೂಜೆ, ಗಂಗಾಪೂಜೆ, ಪುಣ್ಯಹಾ ಶುದ್ಧಿ, ಪಂಚಗವ್ಯ ಶುದ್ಧಿ, ಕೂಷ್ಮಂಡ ಬಲಿ, ಅನ್ನ ಬಲಿ, ಮಹಾಮಂಗಳಾರತಿ ನಂತರ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸುವ ಸಾವಿರಾರು ಭಕ್ತರಿಗೆ ಅನ್ನ ಸಂತರ್ಪಣೆ ವ್ಯವಸ್ಥೆ ಸಹ ಮಾಡಲಾಗಿದ್ದು ಎಲ್ಲಾ ಭಕ್ತರು ಆಗಮಿಸಿ ಯಶಸ್ವಿಗೊಳಿಸುವ ಮೂಲಕ ದೇವರ ಕೃಪೆಗೆ ಪಾತ್ರರಾಗಬೇಕೆಂದು ಗ್ರಾಮಸ್ಥರು ಕೋರಿದ್ದಾರೆ.

## ಕಾನೂನು ಸಾಕ್ಷರತಾ ಅರಿವು ಜಾಥ ಕಾರ್ಯಕ್ರಮ

» ದಾವಣಗೆರೆ

ನ.9 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ರಾಷ್ಟ್ರೀಯ ಕಾನೂನು ಸೇವಾ ದಿನಾಚರಣೆಯ ಅಂಗವಾಗಿ ಕಾನೂನು ಸಾಕ್ಷರತಾ ಅರಿವು ಜಾಥ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಆರ್.ಎಲ್. ಕಾನೂನು ಮಹಾವಿದ್ಯಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪೊಲೀಸ್ ಇಲಾಖೆ, ಹಾಗೂ ವಿವಿಧ ಕಾಲೇಜುಗಳ ಸಹಯೋಗದಲ್ಲಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಜಾಥ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್ ಹೆಗಡೆ ಉದ್ಘಾಟಿಸುವರು.



ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ ಕರೆಣ್ಣವರ, ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್.ಬಿ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಅರುಣ್ ಕುಮಾರ್.ಎಲ್.ಹೆಚ್, ಆರ್.ಎಲ್ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಯತೀಶ್, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಅಧಿಕಾರಿ ಡಾ.ಹೆಚ್.ಲಕ್ಷ್ಮೀಕಾಂತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಾಸಂತಿ ಉಪ್ಪಾರ್, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕರಿಬಸಪ್ಪ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೊಟ್ರೇಶ್.ಜಿ, ಸಂಚಾರಿ ಪೊಲೀಸ್ ಠಾಣೆಯ ಪೊಲೀಸ್ ವೃತ್ತ ನಿರೀಕ್ಷಕರಾದ ನಲವಾಗಲು ಮಂಜುನಾಥ್, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರಾದ ಜಿ.ಕೆ ಬಸವರಾಜ ಗೋಪ್ಪಾನಾಳ್, ಕಾರ್ಯದರ್ಶಿ ಬಸವರಾಜ್.ಎಸ್, ಸಹ ಕಾರ್ಯದರ್ಶಿ ಎ.ಎಸ್ ಮಂಜುನಾಥ್ ಭಾಗವಹಿಸುವರು.

**ಪ್ರಮುಖ ಸುದ್ದಿ**

# ಯೋಗದಿಂದ ರೋಗ ಮುಕ್ತ ಸಮಾಜ ನಿರ್ಮಾಣ

» ದಾವಣಗೆರೆ

ಯೋಗದಿಂದ ರೋಗ ಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ವಿರಕ್ತಮಠದ ಬಸವಪ್ರಭು ಸ್ವಾಮೀಜಿ ಹೇಳಿದರು.

ಜಯದೇವ ಯೋಗ ಮತ್ತು ಧ್ಯಾನ ಕೇಂದ್ರ , ದಾವಣಗೆರೆ ಜಿಲ್ಲಾ ಯೋಗಾಸನ ಕ್ರೀಡಾ ಸಂಸ್ಥೆ ಹಾಗೂ ಶ್ರೀ ಜಗದ್ಗುರು ಮುರುಘರಾಜೇಂದ್ರ ಶಿವಯೋಗಾಶ್ರಮ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ನಗರದ ಶಿವಯೋಗಾಶ್ರಮದ ಆವರಣದಲ್ಲಿ ನಡೆದ ದ್ವಿತೀಯ ದಾವಣಗೆರೆ ಜಿಲ್ಲಾ ಯೋಗಾಸನ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಜಯದೇವ ಯೋಗ ಮತ್ತು ಧ್ಯಾನ ಕೇಂದ್ರ ಉತ್ತಮ ಕಾರ್ಯ ಮಾಡಿದೆ. ಮೂರು ವರ್ಷಗಳ ಹಿಂದೆ ಜಯದೇವ ಜಗದ್ಗುರುಗಳ ಸ್ಮರಣೋತ್ಸವದ



ಅಂಗವಾಗಿ ಮೊದಲ ಬಾರಿ ಯೋಗಾಸನ ಸ್ಪರ್ಧೆಯನ್ನು ನಡೆಸಲಾಗಿತ್ತು. ಈ ಬಾರಿ ಕರ್ನಾಟಕದಲ್ಲಿಯೇ ಪ್ರಪ್ರಥಮವಾಗಿ ಜಿಲ್ಲಾ ಮಟ್ಟದ ಯೋಗಾಸನ ಸ್ಪರ್ಧೆಯನ್ನು ಆನ್ ಲೈನ್ ನೋಂದಣಿ ಮೂಲಕ ಮಾಡಿದ್ದು, 246 ಜನ ಆನ್ ಲೈನ್ ನಲ್ಲಿ ಹಾಗೂ ಸ್ಥಳದಲ್ಲಿ 49 ಜನ ನೋಂದಾಯಿಸಿದ್ದಾರೆ. ಮುಂದೆ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಯನ್ನು ಜಯದೇವ ಕೇಂದ್ರ ಹಮ್ಮಿಕೊಳ್ಳಲಿ" ಎಂದು ಆಶಿಸಿದರು.

ಕರ್ನಾಟಕ ರಾಜ್ಯ ಯೋಗಾಸನ ಕ್ರೀಡಾ ಸಂಸ್ಥೆಯ ಅಧ್ಯಕ್ಷ ಜಿ. ಎನ್.ಕೃಷ್ಣಮೂರ್ತಿ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ದಾವಣಗೆರೆ ಜಿಲ್ಲಾ ಯೋಗಾಸನ ಕ್ರೀಡಾ ಸಂಸ್ಥೆ ಯ ಅಧ್ಯಕ್ಷ ಅಜ್ಜಂಪುರ ಶೆಟ್ರು ಮೃತ್ಯುಂಜಯ, ಶಿವಯೋಗಾಶ್ರಮ ಟ್ರಸ್ಟ್ ನ ಟ್ರಸ್ಟಿ ಎಂ. ಜಯಕುಮಾರ್, ಮಹಾನಗರ ಪಾಲಿಕೆ ಸದಸ್ಯ ಶಾಂತಕುಮಾರ ಸೋಗಿ ಹಾಗೂ ಶ್ರೀಮತಿ ಕೆ. ಎಚ್. ಸುಲೋಚನ, ಕರ್ನಾಟಕ ರಾಜ್ಯ ಯೋಗಾಸನ ಕ್ರೀಡಾ ಸಂಸ್ಥೆಯ ಕಾರ್ಯದರ್ಶಿ ಕೆ. ಪ್ರಭು, ಶ್ರೀಮತಿ ಭಾರತಿ ಬೇತೂರು ಬಸವರಾಜಪ್ಪ ಭಾಗವಹಿಸಿದ್ದರು. ಜಯದೇವ ಯೋಗ ಮತ್ತು ಧ್ಯಾನ ಕೇಂದ್ರದ ಅಧ್ಯಕ್ಷ ಶರಣಾರ್ಥಿ ಬಕ್ಕಪ್ಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಡಾ. ಎಸ್.ಬಿ. ರವಿಕುಮಾರ್ ಕಾರ್ಯಕ್ರಮ ನಿರೂಪಿಸಿದರು. ಸ್ಪರ್ಧೆಯನ್ನು ಮಹಿಳೆ ಹಾಗೂ ಪುರುಷರಿಗೆ ಪ್ರತ್ಯೇಕವಾಗಿ ವಯೋಮಿತಿಯ ಆಧಾರದ ಮೇಲೆ ಎಂಟು ಗುಂಪುಗಳಲ್ಲಿ ನಡೆಸಲಾಯಿತು.

ಆಕರ್ಷಕ ಯೋಗ ನೃತ್ಯ ಪ್ರದರ್ಶನ ನೀಡಿದ ಹರಿಹರದ ಕು. ಸೃಷ್ಟಿ ಹಾಗೂ ಚಿ. ಮಲ್ಲಿಕಾರ್ಜುನ ಮಾಳಗಿ ಎಲ್ಲರ ಪ್ರಶಂಸೆ ಗಳಿಸಿದರೆ ಕು.ಋತು ಹಿರೇಮಠ ತಮ್ಮ ಭರತನಾಟ್ಯ ಪ್ರದರ್ಶನದಿಂದ ರಂಜಿಸಿದರು.

## ಫಾಸ್ಟ್ ನ್ಯೂಸ್

### ವಿವಿಧ ಯೋಜನೆಗಳಡಿ ಸೌಲಭ್ಯಕ್ಕೆ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ 2023-24ನೇ ಸಾಲಿಗೆ ಪರಿಶಿಷ್ಟ ಪಂಗಡದ ಜನರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸು ಸಂಬಂಧ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 29 ಅರ್ಜಿ ಸಲ್ಲಿಸಲು ಕೊನೆಯ ದಿನ. ಯೋಜನೆಗಳ ವಿವರ: ಸ್ವಯಂ ಉದ್ಯೋಗ ನೇರಸಾಲಯೋಜನೆ,ಉದ್ಯಮಶೀಲತಾಯೋಜನೆ, ಸ್ವಾವಲಂಭಿ ಸಾರಥಿ, ಮೈಕ್ರೋ ಕ್ರೆಡಿಟ್ ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಗ್ರಾಮ ಒನ್, ಕರ್ನಾಟಕ ಒನ್, ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗದ ಸರಸ್ವತಿಪುರಂ ಮುಖ್ಯ ರಸ್ತೆಯಲ್ಲಿರುವ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಸರ್ಕಾರಿ ವೀಕ್ಷಣಾಲಯ ಸಂಸ್ಥೆಗೆ ಬಾಡಿಗೆಗೆ ಕೊಠಡಿ ಅವಶ್ಯ

» **ಚಿತ್ರದುರ್ಗ**

ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಾರ್ಯನಿರ್ವಹಿಸಿತ್ತಿರುವ ಸರ್ಕಾರಿ ವೀಕ್ಷಣಾಲಯ (ಬಾಲಕರು) ಸಂಸ್ಥೆಗೆ ಚಿತ್ರದುರ್ಗ ನಗರದಲ್ಲಿ ಸೂಕ್ತ ಮೂಲಭೂತ ಸೌಕರ್ಯಗಳನ್ನೊಳಗೊಂಡಿರುವ 3 ರಿಂದ 4 ಮಲಗುವ ಕೊಠಡಿಗಳು, 2 ಸ್ನಾನದ ಗೃಹ, 4 ಶೌಚಾಲಯ ಹಾಗೂ ಕಟ್ಟಡಕ್ಕೆ ಸೂಕ್ತ ಕಾಂಪೌಂಡ್ ಇರುವ ಕಟ್ಟಡ ಅಥವಾ ಮನೆ ತಾತ್ಕಾಲಿಕವಾಗಿ ಬಾಡಿಗೆಗೆ ಬೇಕಾಗಿದೆ. ಚಿತ್ರದುರ್ಗ ನಗರದಲ್ಲಿ ಅಂತಹ ಕಟ್ಟಡ ಹೊಂದಿರುವ ಮಾಲೀಕರು ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ಈ ಕಚೇರಿಯನ್ನು ಸಂಪರ್ಕಿಸಬಹುದುಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-295822, 8217710292, 9741812148, 8792325616 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ.೯ರಂದು "ಅರೆಕಾಲಿಕ ಕಾನೂನು ಸ್ವಯಂ ಸೇವಕರಿಗೆ" ಒಂದು ದಿನದ ತರಬೇತಿ

» **ಚಿತ್ರದುರ್ಗ**

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಸರಸ್ವತಿ ಕಾನೂನು ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಕಾನೂನು ಸೇವೆಗಳ ದಿನಾಚರಣೆ ಮತ್ತು ಅದರ ಅಂಗವಾಗಿ "ಅರೆಕಾಲಿಕ ಕಾನೂನು ಸ್ವಯಂ ಸೇವಕರಿಗೆ" ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ನವೆಂಬರ್ 9ರಂದು ಮಧ್ಯಾಹ್ನ 2.30ಕ್ಕೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್.ರೇಖಾ ಉದ್ಘಾಟಿಸುವರು. ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಪ್ರೊ. ಎಂ.ಎಸ್.ಸುಧಾದೇವಿ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಪ್ರಾಸ್ತಾವಿಕ ನುಡಿಗಳನ್ನಾಡುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್ ಭಾಗವಹಿಸುವರು. orientation course ಕುರಿತು ವಕೀಲರಾದ ಕೆ.ಎಸ್.ವಿಜಯ್ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ನವಂಬರ್ 9 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.ಎಫ್-1 ಎಸ್.ವಿ.ಟಿ: ಮಾಮಾಸ್‌ಜಾಯಿಂಟ್‌ರಸ್ತೆಹಾಗೂಸುತ್ತಮುತ್ತಲಿನ ಪ್ರದೇಶಗಳು., ಎಫ್-05 ಮೌನೇಶ್ವರ: ಹೆಚ್.ಕೆ. ಆರ್. ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸ ಬಡಾವಣೆ, ಮೌನೇಶ್ವರ ಬಡಾವಣೆ, ಸೈಯದ್ ಪೀರ್ ಬಡಾವಣೆ, ಐ.ಟಿ.ಐ. ರಿಂಗ್‌ರಸ್ತೆ, ಜಯನಗರ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಭಗೀರಥ ಸರ್ಕಲ್, ಕಾಳಿಕಾಂಬ ದೇವಸ್ಥಾನ, ಶಕ್ತಿನಗರ, ಹಾಗುಇ.ಎಸ್.ಐ .ಆಸ್ಪತ್ರೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು".ಎಫ್-06 ಡಿಸಿಎಮ್ : ಶಕ್ತಿ ನಗರ, ಬನಶಂಕರಿ ದೇವಸ್ಥಾನದ ಸುತ್ತಮುತ್ತ, ರಾಜೇಂದ್ರ ಬಡಾವಣೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು, ಎಫ್-7 ಜಿ&ಎಸ್: ಪಿ.ಬಿ. ರಸ್ತೆ., ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು, ಎಫ್-08 ಕೆಟಿಜೆ: ಶ್ರೀ ಮುರಘರಾಜೇಂದ್ರ ಸ್ವಾಮಿಗಳ ಮಠ, ಜಾಧವ್ ಕ್ಲಿನಿಕ್ ಸುತ್ತ ಮುತ್ತ, ಶಿವಪ್ಪ ವೃತ್ತದಿಂದ ಜಯದೇವ ವೃತ್ತದವರೆಗೆ ಹಾಗು ಸುತ್ತಮುತ್ತ ಪ್ರದೇಶಗಳುವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ

# ಪ್ರತಿಮಾ ಕೊಲೆ ಪ್ರಕರಣ; ಸಿಬಿಐಗೆ ಕೊಡಿ

» **ಚಿತ್ರದುರ್ಗ**



ಗಣಿಅಧಿಕಾರಿ ಪ್ರತಿಮಾ ಕೊಲೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು, ಹಸಿರು ಪಟಾಕಿ ಬಳಕೆಗೆ ಸರ್ಕಾರ ಕಡ್ಡಾಯ ಕ್ರಮ ಜಾರಿಗೊಳಿಸಬೇಕು, ಹುಲಿ ಉಗುರು ಪ್ರಕರಣದಲ್ಲಿ ರಾಜಕಾರಣಿಗಳು / ಸ್ಟಾರ್ ನಟರು - ಘಟಾನುಘಟಿ ಉದ್ಯಮಿಗಳ ತನಿಖೆ ಮಾಡುವಂತೆ ಸರ್ಕಾರವನ್ನು ಪರಿಸರ ಮತ್ತು ವನ್ಯ ಜೀವಿ ಸಂರಕ್ಷಣಾ ವೇದಿಕೆ ಉಪಾಧ್ಯಕ್ಷೆ ಅಂಬಿಕಾ ದಿನೇಶ್ ಒತ್ತಾಯಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಸುಬ್ರಹ್ಮಣ್ಯಪುರ ಪೊಲೀಸ್ ಠಾಣೆ ವ್ಯಾಪ್ತಿಯ ದೊಡ್ಡಕಲ್ಲಸಂದ್ರದ ಗೋಕುಲ್, ಆಪಾರ್ಟಿಟ್ ನಲ್ಲಿ ಗಣಿ-ಭೂವಿಜ್ಞಾನ ಇಲಾಖೆಯ ಅಧಿಕಾರಿ ಪ್ರತಿಮಾರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ.ನವೆಂಬರ್ 4ರ ರಾತ್ರಿ 8.30 ಪ್ರತಿಮಾ ಅವರನ್ನು ಮನೆಯ ಮುಂಭಾಗ ಉಸಿರುಗಟ್ಟಿಸಿ, ಕತ್ತು ಇರಿದು ಕೊಲೆ ಮಾಡಲಾಗಿತ್ತು. ಇದೀಗ ಘಟನೆ ಸಂಬಂಧ ಪ್ರತಿಮಾ, ಕಾರು ಚಾಲಕ ಕಿರೀಣನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದ್ದು, ಆತನೆ ಕೊಲೆ ಮಾಡಿದ್ದಾರೆ ಎಂದು ಹೇಳುತ್ತಿದ್ದರೂ ಇದರ ಹಿಂದೆ ರಾಜಕೀಯ ಕೈವಾಡ ಇದ್ದು ಸಿಬಿಐ ತನಿಖೆಯಾಗಬೇಕಿದೆ ಎಂದು ಆಗ್ರಹಿಸಿದರು.

ಗಣಿ-ಭೂವಿಜ್ಞಾನ ಇಲಾಖೆ ಉಪ ನಿರ್ದೇಶಕಿ ಪ್ರತಿಮಾ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಆರ್.ಆರ್ ನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನರ ಹೆಸರು ಕೇಳಿಬಂದಿದೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಮುನಿರತ್ನರನ್ನು ವಿಚಾರಣೆ ನಡೆಸುವಂತ ಒತ್ತಾಯಿಸಿದ್ದು, "ಕೊಲೆಯಾಗಿರುವ ಹಿರಿಯ ಭೂ ವಿಜ್ಞಾನಿ ಪ್ರತಿಮಾ ಅವರು ಪ್ರಭಾವಿ ರಾಜಕಾರಣಿ ಮಾಜಿ ಸಚಿವ ಮುನಿರತ್ನ ವಿರುದ್ಧ ಆಕ್ರಮ ಸ್ಫೋಟಕ ಬಳಕೆ ಮಾಡಿ ಕಲ್ಲು ಶಿಲೆಗಳನ್ನು ಪುಡಿ ಮಾಡಿದ್ದ ಸಂಬಂಧ ಹಾಗೂ ಸರ್ಕಾರಕ್ಕೆ 25 ಲಕ್ಷ ರಾಯಧನ ನಷ್ಟ ಮಾಡಿದ್ದ ಕಾರಣಕ್ಕೆ ಹುಣಸಮಾರನಹಳ್ಳಿಯಲ್ಲಿ ಕ್ರಿಮಿನಲ್ ಮೊಕದ್ದಮೆ ಹೂಡಿದ್ದರು. ಬಹುಶಃ ಇವರ ಸಹೋದರನ ಹಳೆ ನಂಟು ಈ ಕೊಲೆ ಪ್ರಕರಣದಲ್ಲಿ ಏನಾದರೂ ಹಸ್ತಕ್ಷೇಪ ಮಾಡಿದ್ದು ತನಿಖೆ ನಡೆಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ವೇದಿಕೆಯ ನಿರ್ದೇಶಕ ಮಧುಕುಮಾರ್ ಮಾತನಾಡಿ, ಬೆಳಕಿನ ಹಬ್ಬ ದೀಪಾವಳಿ ಸಮೀಪಿಸುತ್ತಿದ್ದು, ಮನೆಗಳಲ್ಲಿ ದೀಪ 'ಬೆಳ, ಪಟಾಕಿ ಸಿಡಿಸಿ ಸಂಭ್ರಮಿಸಲಾಗುತ್ತದೆ.

ಪಟಾಕಿ ಸಿಡಿಸುವ ವಿಚಾರವಾಗಿ ಪರಿಸರ ಕಾಳಜಿ ಅಗತ್ಯ ಪಟಾಕಿ ಹಾರಿಸಬೇಡಿ ಬದಲಿಗೆ ಪರಿಸರಕ್ಕೆ ಪೂರಕವಾಗುವ ಪಟಾಕಿಗಳನ್ನು ಹಾರಿಸಿ ಸಿಡಿಸುವಂತೆ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. 2018ರ ಸುಪ್ರೀಂ ಕೋರ್ಟ್ ನಿರ್ದೇಶನದ ಅನ್ವಯ ಹಾಗೂ ವಾಯುಮಾಲಿನ್ಯ ತಡೆ ಮತ್ತು ಮಕ್ಕಳ ಆರೋಗ್ಯ ಹಿತದೃಷ್ಟಿಯಿಂದ 2020ರಲ್ಲಿ ಅಂದಿನ ಸರ್ಕಾರ ಪಟಾಕಿ ನಿಷೇಧಿಸಿತ್ತು. ಅಲ್ಲದೆ ಹಸಿರು ಪಟಾಕಿ ಸಿಡಿಸುವಂತೆ ಸೂಚಿಸಿತ್ತು. ಈ ಬಗ್ಗೆ ಪರಿಸರ ಮತ್ತು ತನ್ನಜೀವಿ ಸಂರಕ್ಷಣಾ ವೇದಿಕೆಯು ನಾಗರೀಕರಿಗೆ ಪರಿಸರ ದೀಪಾವಳಿ ಆಚರಿಸುವಂತೆ ಮನವಿ ಮಾಡಿದ್ದಾರೆ.

ವೇದಿಕೆಯ ರಾಜ್ಯ ಸಂಚಾಲಕ ಟಿ.ರುದ್ರಮುನಿ ಮಾತನಾಡಿ, ತನ್ನ ಜೀವಿಗಳು ದೇಶದ ಭಾಗಗಳು ಬಹಳ ಹಿಂದಿನಿಂದಲೂ ವ್ಯಾಪಾರದ ವಸ್ತುಗಳಾಗಿವೆ. ಹುಲಿ ಉಗುರಿನ ಲಾಕೆಟ್ ಮಾಡಿಕೊಳ್ಳುವುದು, ಹುಲಿಗಳ ಹಲ್ಲು, ಆನೆ ದಂತ, ಬೆಂಕಿ ಹಾಗೂ ಕಡವೆಗಳ ಕೊಂಬು, ಹುಲಿ ಜಿಂಕೆಗಳ ಚರ್ಮ, ಆನೆ ಕೂದಲುಗಳಿಂದ ಉಂಗುರ ತಯಾರಿಸಿಕೊಳ್ಳೋದು... ಹೀಗೆ ಪ್ರಾಣಿಗಳ ದೇಹದ ಭಾಗಗಳನ್ನ ವಿವಿಧ ರೀತಿಯಲ್ಲಿ ಬಳಕೆ ಮಾಡಿಕೊಳ್ತಾರೆ. ಜಿಂಕೆ ಹಾಗೂ ಕಡವೆಗಳ ಕೊಂಬುಗಳನ್ನು ಹಿಂದಿನ ಕಾಲದಲ್ಲಿ ಮನೆಯ ಗೋಡೆಗಳಲ್ಲಿ ನೇತು ಹಾಕಿದ್ರು, ತಾವೇ ಕೊಂದು ಹಾಕಿದ ಹುಲಿ ಚರ್ಮವನ್ನ ಬೆಂಕೆಗಳ ಚರ್ಮವನ್ನು ಮನೆಯಲ್ಲಿ ಪ್ರದರ್ಶನಕ್ಕೆ ಇಡ್ತಿದ್ರು, ಇದೀಗ ಇದು ಆಪರಾಧವಾಗಿದೆ. 1972ರಿಂದ ದೇಶದಲ್ಲಿ ವನ್ಯಜೀವಿ ರಕ್ಷಣಾ ಅಧಿನಿಯಮ ಜಾರಿಯಲ್ಲಿದೆ. ಈ ಕಾನೂನು ಕಾಡಿನ ಮಾಣಿಗಳ ರಕ್ಷಣೆಗೆ ಬದ್ಧವಾಗಿದೆ. ಕಾಡು ಪ್ರಾಣಿಗಳ ಬೇಟೆ, ಮಾಂಸ ಭಕ್ಷಣೆ ಹಾಗೂ ಅವುಗಳ ದೇಹದ ಬಿಡಿ ಭಾಗಗಳ ಮಾರಾಟವನ್ನ ತಡೆಯೋದಕ್ಕಾಗಿ ಈ ಕಾನೂನು ರೂಪಿಸಲಾಗಿದೆ ಎಂದರು.

ಹುಲಿ, ಉಗುರು ಧರಿಸಿದ ಹಲವು ನಟರು. ನಿರ್ಮಾಪಕರು ರಾಜಕಾರಣಿಗಳು ಹಾಗೂ ಘಟನಾಘಟ ಉದ್ಯಮಿಗಳ ವಿರುದ್ಧವೂ ಹುಲಿ' ಉಗುರಿನ ಲಾಕೆಟ್ ಧರಿಸಿದ ಆರೋಪ ಇದೆ, ವನ್ಯಜೀವಿ ಸಂರಕ್ಷಣಾ ಕಾಯ್ದೆಗೆ ಸರ್ಕಾರ ಇನ್ನಷ್ಟು ಬಲ ತುಂಬಿದೆ. 2022ರಲ್ಲಿ ಈ ಕಾಯ್ದೆಗೆ ತಿದ್ದುಪಡಿ ತಂದು ಹಲವು ಲೋಪದೋಷಗಳನ್ನು ಸರಿಪಡಿಸಲಾಗಿದೆ. ಹುಲಿಗಳ ಮಾನವನ ಧನದಾಹಕ್ಕೆ ಅಮಾಯಕ ವನ್ಯ ಜೀವಿಗಳು ಬಲಿಯಾಗುತ್ತಲೇ ಇವೆ. ಇದನ್ನು ಕಾನೂನಿನ ಮೂಲಕ ರಕ್ಷಣೆಯನ್ನು ಮಾಡಬೇಕಿದೆ ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

# ನ.16ರಂದು ಯುವಜನೋತ್ಸವ ಸ್ಪರ್ಧೆ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಇದೇ ನವೆಂಬರ್ 16ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಕ್ರೀಡಾಂಗಣದ ಸಭಾಂಗಣದಲ್ಲಿ 2023-24ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವದ ಆಯ್ಕೆ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಈ ಕಾರ್ಯಕ್ರಮವು ಬೆಳಗ್ಗೆ 10.30 ರಿಂದ ಪ್ರಾರಂಭವಾಗಲಿರುವುದರಿಂದ ಸ್ಪರ್ಧಾಳುಗಳು 10 ಗಂಟೆಯ ಒಳಗಾಗಿ ಜಿಲ್ಲಾ ಕ್ರೀಡಾಂಗಣದಲ್ಲಿರುವ ಸಭಾಂಗಣದಲ್ಲಿ ವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸುವವರು 15 ರಿಂದ 29 ವರ್ಷ ಒಳಗಿನವರಾಗಿದ್ದು, ಕಡ್ಡಾಯವಾಗಿ ಜನ್ಮ ದಿನಾಂಕ ದಾಖಲೆಯೊಂದಿಗೆ (ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಜನ್ಮದಿನಾಂಕ ದೃಢೀಕರಣ ಪತ್ರ) ಭಾಗವಹಿಸಬಹುದು. ದಾಖಲೆಗಳನ್ನು ತರದೇ ಇರುವವರಿಗೆ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ. ಚಿತ್ರದುರ್ಗ ಜಿಲ್ಲೆಯಲ್ಲಿ ವಾಸವಾಗಿರುವವರು ಮಾತ್ರ ಭಾಗವಹಿಸಲು ಅವಕಾಶ ಇರುತ್ತದೆ. ಜಿಲ್ಲಾ ಮಟ್ಟದಲ್ಲಿ ವಿಜೇತರಾದವರು ರಾಜ್ಯ ಮಟ್ಟದಲ್ಲಿ, ರಾಜ್ಯ ಮಟ್ಟದಲ್ಲಿ ವಿಜೇತರಾದವರು ರಾಷ್ಟ್ರಮಟ್ಟದಲ್ಲಿ ಭಾಗವಹಿಸಬಹುದಾಗಿರುತ್ತದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾಲೇಜು ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳು, ಮಹಿಳಾ ಸಂಘ ಸಂಸ್ಥೆಗಳು, ಜಿಲ್ಲೆಯ ಎಲ್ಲಾ ತಾಲ್ಲೂಕಿನಿಂದ ಸ್ಪರ್ಧಾಳುಗಳು ಭಾಗವಹಿಸಿ ಈ ಅವಕಾಶವ ಉಪಯೋಗಿಸಿಕೊಳ್ಳಲು ತಿಳಿಸಲಾಗಿದೆ.

ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಗಳಲ್ಲಿ ಭಾಗವಹಿಸುವವರಿಗೆ ತಾಲ್ಲೂಕು ಕೇಂದ್ರಸ್ಥಾನದಿಂದ ಜಿಲ್ಲಾ ಕೇಂದ್ರಸ್ಥಾನಕ್ಕೆ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ನೀಡಲಾಗುವುದು.

ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಗಳ ವಿವರ: ಜಾನಪದ ನೃತ್ಯ (ತಂಡ) (ಕನ್ನಡ ಆಂಗ್ಲ ಹಿಂದಿ ಭಾಷೆಯಲ್ಲಿರಬೇಕು) 10ಜನ ಸಮಯ 15 ನಿಮಿಷ, ಜಾನಪದ ಗೀತೆ (ತಂಡ) (ಕನ್ನಡ ಆಂಗ್ಲ ಹಿಂದಿ ಭಾಷೆಯಲ್ಲಿರಬೇಕು) 10 ಜನ ಸಮಯ 7 ನಿಮಿಷ, ಜನಪದ ನೃತ್ಯ (ವೈಯುಕ್ತಿಕ) (ಕನ್ನಡ ಆಂಗ್ಲ ಹಿಂದಿ ಭಾಷೆಯಲ್ಲಿ) ಸಮಯ 7 ನಿಮಿಷ, ಜನಪದ ಗೀತೆ (ವೈಯುಕ್ತಿಕ) ಕನ್ನಡ ಆಂಗ್ಲ ಹಿಂದಿ ಭಾಷೆಯಲ್ಲಿ) ಸಮಯ 7 ನಿಮಿಷ, ಕಥೆ ಬರೆಯುವುದು (ವೈಯುಕ್ತಿಕ), ಸ್ಟೋರಿ ರೈಟಿಂಗ್ (1000 ಪದಗಳಿಗೆ ಮೀರದಂತೆ) ಕನ್ನಡ ಆಂಗ್ಲ ಹಿಂದಿ ಭಾಷೆಯಲ್ಲಿರಬೇಕು ವಿಷಯವು ಆಕ್ರಮಣಕಾರಿಯಾಗಿರಬಾರದು, ಈಗಾಗಲೇ ಪ್ರಕಟವಾಗಿರಬಾರದು, ಸ್ಪಷ್ಟವಾಗಿರಬೇಕು, ಜಾತಿ ಪಂಥ ಧರ್ಮ ವರ್ಣ ಜನಾಂಗವನ್ನು ಒಳಗೊಂಡಿರಬಾರದು ಹಾಗೂ ಸೂಕ್ತವಲ್ಲದ ವಿಷಯ ಒಳಗೊಂಡಿರಬಾರದು ಸಮಯ 60 ನಿಮಿಷ, ಪೋಸ್ಟರ್ ಮೇಕಿಂಗ್ (ಭಿತ್ತಿ ಪತ್ರ ತಯಾರಿಕೆ) (ವೈಯುಕ್ತಿಕ) ಪೋಸ್ಟರ್ ಕನ್ನಡ ಆಂಗ್ಲ ಹಿಂದಿ ಭಾಷೆಯಲ್ಲಿರಬೇಕು ಭಿತ್ತಿಪತ್ರವು ಯಾವುದೇ ಸಂಸ್ಥೆಯನ್ನು ಅಥವಾ ಬ್ರಾಂಡ್ ಹೆಸರು ಪ್ರತಿನಿಧಿಸುತ್ತಿರಬಾರದು ಸ್ಪರ್ಧಿಗಳು ತಾವು ಸಲ್ಲಿಸುವ ಭಿತ್ತಿಪತ್ರವು 20- 30 ಪದಗಳೊಳಗೆ ಇರುವ ಶೀರ್ಷಿಕೆ ಒಳಗೊಂಡಿರಬೇಕು ಸಮಯ 90 ನಿಮಿಷ ನಿಗಧಿಪಡಿಸಲಾಗಿದೆ.

Declamation (ಘೋಷಣೆ) ಭಾಷೆ: ಹಿಂದಿ ಮತ್ತು ಆಂಗ್ಲಭಾಷೆಯಲ್ಲಿ ಇರಬೇಕು (ರಾಷ್ಟ್ರಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು) ಕನ್ನಡ ಭಾಷೆಯನ್ನು ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮದವರೆಗೆ ಮಾತ್ರ ಸೀಮಿತಗೊಳಿಸಿದೆ. ಸ್ಪರ್ಧಿಗಳು ಸಿದ್ಧಪಡಿಸಿಕೊಂಡಿರುವ ಆಯ್ಕೆ ವಿಷಯಗಳ ಬಗ್ಗೆ ಭಾಷಣ ಮಾಡಬೇಕು ತೀರ್ಮಾನವು, ಭಾಷಣದ ನಿಖರತೆ, ಹರಿವು, ವಿಷಯಕ್ಕೆ ಸಂಬಂಧಿಸಿದಂತೆ ಮಂಡಿಸುವ ಠಿಯುಟಿಣ ಗಳು, ಶಬ್ದ ಪದಗಳು ಪುನರಾವರ್ತನೆ ಆಗದಿರುವುದು, ವಿಷಯದ ಬಗ್ಗೆ ಅರಿವು ಮತ್ತು ಆತ್ಮವಿಶ್ವಾಸ ಹೊಂದಿರುವುದರ ಮೇಲೆ ಅವಲಂಭಿಸಿರುತ್ತದೆ. ಛಾಯಾಚಿತ್ರಣ (ವೈಯುಕ್ತಿಕ) (photography) (Prrotographs in etectronic mode) ವಿಷಯಗಳನ್ನು ಒಂದನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು, ಮೊಬೈಲ್‌ನಿಂದ ತೆಗೆದ ಚಿತ್ರಗಳನ್ನು ಸಹ ಪರಿಗಣಿಸಬಹುದಾಗಿದೆ. ವಿಷಯ ಪ್ರಗತಿಶೀಲ ಭಾರತ, ಆತ್ಮನಿರ್ಧಾರ, ಭಾರತ, ಯೋಗ ಕ್ರೀಡೆ ಫಿಟ್ನೆಸ್‌ಗಾಗಿ ದೈಹಿಕ ಚಟುವಟಿಕೆ, ಪ್ರಕೃತಿ ದೃಶ್ಯಗಳು, ಸ್ಪರ್ಧಿಗಳು ತಾವು ಸಲ್ಲಿಸುವ ಭಿತ್ತಿಪತ್ರವು 20-30 ಪದಗಳೊಳಗೆ ಇರುವ ಶೀರ್ಷಿಕೆ ಒಳಗೊಂಡಿರಬೇಕು.ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂರವಾಣಿ ಸಂಖ್ಯೆ 08194-235635 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಪಿಸಿ, ಪಿಎನ್‌ಡಿಟಿ ಸಭೆ



» **ದಾವಣಗೆರೆ**

ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆಯಡಿ ಜಿಲ್ಲೆಯಲ್ಲಿರುವ ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಂಡು ಸರ್ಕಾರದ ಮಾರ್ಗಸೂಚಿ ಪಾಲಿಸಬೇಕು ಎಂದು ಉಪವಿಭಾಗಾಧಿಕಾರಿ ದುರ್ಗಾಶ್ರೀ ಅಧಿಕಾರಿಗಳಿಗೆ ತಿಳಿಸಿದರು. ಮಂಗಳವಾರ ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ಪಿ.ಸಿ ಮತ್ತು ಪಿ.ಎನ್.ಡಿ.ಟಿ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಆರೋಗ್ಯ ಸಂಸ್ಥೆಗಳು ಸರ್ಕಾರದ ಇ-ಕಲ್ಯಾಣಿ ಸಾಫ್ಟ್‌ವೇರ್‌ನಲ್ಲಿ ನೋಂದಣಿ ಮಾಡದಿರುವ ಮತ್ತು ನಿಗದಿತ ನಿಯಮ ಪಾಲನೆ ಹಾಗೂ ದಾಖಲೆಗಳನ್ನು ನಿರ್ವಹಿಸದೇ ಇರುವ ಆರೋಗ್ಯ ಸಂಸ್ಥೆಗಳ ವಿರುದ್ಧ ನೋಟಿಸ್ ಜಾರಿ ಮಾಡಿ ಕ್ರಮ ಕೈಗೊಳ್ಳಬೇಕು.

ನಿಟ್ಟುವಳಿ ಇ.ಎಸ್.ಐ ಹಾಸ್ಪಿಟಲ್, ನಗರದ ಎಸ್.ಎಸ್ ನಾರಾಯಣ ಹೃದಯಾಲಯ, ಹರಿಹರ ತಾಲ್ಲೂಕಿನ ಜನನಿ ನರ್ಸಿಂಗ್ ಹೋಂ ಮತ್ತು ಅಕ್ಷಯ ಹಾಸ್ಪಿಟಲ್‌ಗಳು ನೋಂದಣಿ ಅವಧಿ ಪೂರ್ಣಗೊಳಿಸಿದ್ದು, ನೋಂದಣಿ ನವೀಕರಣಕ್ಕಾಗಿ 30 ದಿನಗಳು ಮುಂಚಿತವಾಗಿ ಮನವಿ ಸಲ್ಲಿಸದೇ ಡಿ.ಡಿ. ಮೊತ್ತ ರೂ.17,500 ನವೀಕರಿಣಕ್ಕೆ ಸಲ್ಲಿಸಿದ್ದು, ಕೆ.ಪಿ.ಎಂ.ಇ ನೋಂದಣಿ ಮುಕ್ತಾಯಗೊಂಡಿರುವ ಪ್ರತಿಯನ್ನು ಅಂತರ್ಜಾಲದಲ್ಲಿ ಮನವಿ ಸಲ್ಲಿಸಿದ್ದಾರೆ.ಜಿಲ್ಲೆಯಲ್ಲಿ ಹೊಸದಾಗಿ ನೋಂದಣಿ ಮಾಡುವ ಸಂಸ್ಥೆಗಳು; ಚನ್ನಗಿರಿ ತಾಲ್ಲೂಕಿನಲ್ಲಿರುವ ಶ್ರೀ ಲಕ್ಷ್ಮೀ ಮಲ್ಟಿ ಸ್ಪೆಷಾಲಿಟಿ ಹಾಸ್ಪಿಟಲ್ ಅಂಡ್ ಟ್ರಾಮಾ ಕೇರ್, ಜಗಳೂರು ತಾಲ್ಲೂಕಿನ ರಾಘವ ಡಯಾಗ್ನೋಸ್ಟಿಕ್ ಸೆಂಟರ್ ಅಂಡ್ ಪಾಲಿ ಕ್ಲಿನಿಕ್ ಮತ್ತು ನಗರದ ಎ.ವಿ.ಕೆ ಕಾಲೇಜು ರಸ್ತೆಯಲ್ಲಿರುವ ಶ್ರೀ ಭಗವಾನ್ ಜೈನ್ ಹಾಸ್ಪಿಟಲ್. ಪಿ.ಸಿ. & ಪಿ.ಎನ್.ಡಿ.ಟಿ ಕಾಯ್ದೆಯನ್ನು ಡಯಾಗ್ನೊಸ್ಟಿಕ್ ಸೆಂಟರ್ ನೋಂದಣಿ, ನವೀಕರಣ ಇಂತಹುಗಳಿಗೆ ಮಾತ್ರ ಬಳಕೆ ಮಾಡಿಕೊಳ್ಳದೇ, ಲಿಂಗ ಪತ್ತೆ ತಡೆಗಟ್ಟುವಲ್ಲಿ ಪರಿಣಾಮಕಾರಿಯಾಗಿ ಕಾಯ್ದೆಯನ್ನು ಅನುಷ್ಠಾನಗೊಳಿಸಲು ಪ್ರಯತ್ನಿಸಬೇಕು. ಆದ್ದರಿಂದ ಮುಂದಿನ ಸಭೆಯೊಳಗಾಗಿ ಒಂದೆರಡು ಲಿಂಗ ಪತ್ತೆ ಪರೀಕ್ಷೆ ಮಾಡುವವರ ಹಾಗೂ ಹೆಣ್ಣು ಭ್ರೂಣ ಗರ್ಭಪಾತ ಮಾಡಿಸಿರುವ ಪ್ರಕರಣಗಳನ್ನು ಪತ್ತೆ ಹಚ್ಚಿ ಶಿಕ್ಷೆಗೆ ಗುರಿಯಾಗಿಸಿದರೆ ಇತರರು ಎಚ್ಚೆತ್ತುಕೊಳ್ಳುತ್ತಾರೆ ಎಂದ ಅವರು ಇದೆಲ್ಲಕ್ಕಿಂತ ಹೆಚ್ಚಾಗಿ ಈ ಕೃತ್ಯದಲ್ಲಿ ಭಾಗಿಯಾಗುವ ತಜ್ಞರು, ಸಿಬ್ಬಂದಿ ಮತ್ತು ಅಂತಹ ಪೋಷಕರ ಮನಸ್ಥಿತಿ ಬದಲಾಗಬೇಕು ಎಂದರು.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಷಣ್ಮುಖಪ್ಪ, ಎಲ್, ಡಾ. ಭಾರತಿ, ಸಮಾಜ ಕಾರ್ಯಕರ್ತ ಶ್ರೀಕಾಂತ್ ಉಪಸ್ಥಿತರಿದ್ದರು.

## ದಸರಾ ಸಿ.ಎಂ ಕಪ್ ಕ್ರೀಡಾಕೂಟ, ಅಪ್ರತಿಮ ಸಾಧನೆಗೈದ ವಿಜೇತರಿಗೆ ಅಭಿನಂದನೆ ಸಲ್ಲಿಸಿದ ಜಿಲ್ಲಾಧಿಕಾರಿ

**ದಾವಣಗೆರೆ:** ಮೈಸೂರಿನಲ್ಲಿ ನಡೆದ ದಸರಾ ಸಿ.ಎಂ ಕಪ್ ಕ್ರೀಡಾಕೂಟದಲ್ಲಿ ಜಿಲ್ಲೆಯ 45 ಕ್ರೀಡಾಪಟುಗಳು ಭಾಗವಹಿಸಿದ್ದು, 35 ಜನ ಚಿನ್ನದ ಪದಕ ವಿಜೇತರಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು. ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದಸರಾ ಕ್ರೀಡಾಕೂಟದಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿ ಅವರು ಮಾತನಾಡಿದರು.



## ಪ್ರಮುಖ ಸುದ್ದಿ

# ವಿವಿಧ ಬೇಡಿಕೆಗೆ ಆಗ್ರಹಿಸಿ ಪಿಡಿಓಗಳ ಪ್ರತಿಭಟನೆ

» **ಚಿತ್ರದುರ್ಗ**



ರಾಜ್ಯದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನ್ಯಾಯಯುತ ಬೇಡಿಕೆಗಳಿಗಾಗಿ ಇಲಾಖೆಯೊಂದಿಗೆ ಅಸಹಕಾರ ನೀಡುವ ಮೂಲಕ ಪ್ರತಿಭಟನೆ ಆರಂಭಿಸಲಾಗಿದೆ ಎಂದು ಜಿಲ್ಲಾ ಕರ್ನಾಟಕ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ನಯಾಜ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ರಾಜ್ಯದ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸರ್ಕಾರದ ಪ್ರತಿ ಯೋಜನೆಗಳನ್ನು ಗ್ರಾಮದ ಪ್ರತಿ ಮನೆಗೂ ಹಗಲಿರುಳು ಶ್ರಮವಹಿಸಿ ತಲುಪಿಸುತ್ತಿದ್ದೇವೆ. ಇದರಿಂದ ಗ್ರಾಮೀಣ ಜನರ ಜೀವನಮಟ್ಟ ಬದಲಾವಣೆಗೆ ಸಾಕ್ಷಿ ಏನೆಂದರೆ ಇಲಾಖೆಯು 2010 ರಿಂದ ಇಲ್ಲಿಯವರೆಗೆ ತೆಗೆದುಕೊಂಡಿರುವ ಹಲವಾರು ರಾಷ್ಟ್ರ, ಮಟ್ಟದ ಪ್ರಶಸ್ತಿಗಳು ಮತ್ತು ಗೌರವಗಳು. ಆದರೆ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ವೈಯಕ್ತಿಕ ಮತ್ತು ಸಾಮಾಜಿಕ ಬದುಕು ಕತ್ತಲೆಯ ಕೂಪವಾಗಿದೆ ಇದಕ್ಕೆ ನಮ್ಮ ಇಲಾಖೆಯ ಹಿರಿಯಅಧಿಕಾರಿಗಳುಕಾರಣರಾಗಿರುತ್ತಾರೆ ಎಂದು ದೂರಿದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆ ಸೃಷ್ಟಿಯಾಗಿ ಹದಿಮೂರು ವರ್ಷಗಳು ಕಳೆದರೂ ಸಹ ಒಂದು ಕಾನೂನು ಬದ್ದವಾದ ಜೇಷ್ಠತಾ ಪಟ್ಟಿಯನ್ನು ಅ0ತಿಮಗೊಳಿಸಿಲ್ಲ ಇದರ ಬಗ್ಗೆ ನ್ಯಾಯಾಲಯವೂ ಸಹಾ ನಿರ್ದೇಶನ ನೀಡಿದ್ದರುಸಹಾ ಇಲಾಖೆಯ ಅಧಿಕಾರಿಗಳು ಇದರ ಬಗ್ಗೆ ನಿರ್ಲಕ್ಷ್ಯವಹಿಸಿದ್ದಾರೆ. ರಾಜ್ಯದ ತಾಲೂಕ ಪಂಚಾಯತಿಗಳಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕ (ಗ್ರಾ.ಉ & ಪಂ.ರಾ) ಹುದ್ದೆಗಳಿಗೆ ಬಡ್ತಿ ನೀಡಲು ವಿಳಂಬಧೋರಣೆ ಅನುಸರಿಸುತ್ತಿರುವುದು. ಇದುವರೆವಿಗೂ ಸಹಾ ನಾವು ಇರುವ ಹುದ್ದೆಗಳಲ್ಲಿಯೇ ಕಾಲವನ್ನು ಕಳೆಯಲಾಗುತ್ತಿದೆ. ರಾಜ್ಯದ ಎಲ್ಲಾ ಪ0ಚಾಯತ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು "ಬಿ" ವೃಂದಕ್ಕೆ ಮೇಲ್ದರ್ಜೆಗೆರಿಸುವಂತೆ ಇಲಾಖೆಯ ಉನ್ನತ ಅಧಿಕಾರಿಗಳಿಗೆ ಮನವಿ ಮಾಡಿ ಸಭೆಯನ್ನು ಮಾಡಿದ್ದರು.

ಸಹಾ ಇದುವರೆವಿಗೂ ಸಹಾ ಯಾವುದೇ ಕ್ರಮವನ್ನು ಕೈಗ್ಗೊಂಡಿಲ್ಲ, ಸಾಮಾನ್ಯ ವರ್ಗಾವಣೆ ಅವಧಿ ಮುಗಿದರೂ ಸಹ ನಿಯಮ ಮೀರಿ ನಿರಂತರ ವರ್ಗಾವಣೆ ಮಾಡುತ್ತಿರುವುದು ಹಾಗೂ ಹಲವಾರು ಭಾದಿತ ನೌಕರರಿಗೆ ಸ್ಥಳ ನಿಯುಕ್ತಿ ಮಾಡದೇ, ವೇತನ ಸಹ ಮಾಡದೇ ಇರುವುದು. ಸಹಾ ನಡೆದಿದೆ ಎಂದಿದ್ದಾರೆ.

ಈ ಆಸಹಕಾರ ಸಮಯದ ಕಾಲಾವಕಾಶದೊಳಗಾಗಿ, ಅಧಿಕಾರಿಗಳು ಕೆಲಸ ನಿರ್ವಹಿಸುತ್ತಿರುವುದಿಲ್ಲ, ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಸೇವಾ ವಿಷಯಗಳ ಬಗ್ಗೆ ಇಲಾಖೆಯ ಅಧಿಕಾರಿಗಳಿಗೆ ಯಾವುದೇ ಕಾಳಜಿ ಇರುವುದಿಲ್ಲ, ಇದರಿಂದ ವೈಯಕ್ತಿಕ ಆತ್ಮಗೌರವ ಹಾಗೂ ಸಾಮಾಜಿಕ ಮನ್ನಣೆಯಿಂದ ವಂಚಿತರಾಗಿ ರಾಜ್ಯದ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಗೂ ಪ್ರಭಾರ ಹೊಂದಿರುವ ಸಹಾಯಕ ನಿರ್ದೇಶಕರು (ಗ್ರಾ.ಉ. & ಪಂ.ರಾ) ಕೆಲಸ ನಿರ್ವಹಿಸದೇ ದಿನಾ0ಕ: 08.11.2023 ರಿಂದ ಮೊದಲ ಹಂತವಾಗಿ ಇಲಾಖೆಯ ವಾಟ್ಸಪ್ /ಟೆಲಿಗ್ರಾಂ ಗು0ಪುಗಳಿ0ದ ಹೊರಬರುವುದರೊಂದಿಗೆ ಆನ್ ಲೈನ್, ಸೇವೆಗಳನ್ನು ಸ್ಥಗಿತಗೊಳಿಸಿ, ಮೇಲಾಧಿಕಾರಿಗಳು ಕರೆಯುವ ಸಭೆಗಳಿಗೂ ಸಹ ಗೈರುಹಾಜರಾಗುವುದು ಹಾಗೂ ಮೂಲಭೂತ ಸೇವೆಗಳನ್ನು ಮಾತ್ರ ನೀಡುವುದರೊಂದಿಗೆ ನಮ್ಮ ನ್ಯಾಯಯುತ ಬೇಡಿಕೆಗಾಗಿ ಇಲಾಖೆಯೊಂದಿಗೆ "ಅಸಹಕಾರ" ನೀಡುವ ಮೂಲಕ ಪ್ರತಿಭಟನೆ ಆರಂಭಿಸಲು ತೀರ್ಮಾನಿಸಲಾಗಿದೆ.

ಸದರಿ ಅವಧಿಯಲ್ಲಿ ನಮ್ಮ ಬೇಡಿಕೆಗಳಿಗೆ ಸ್ಪಂದನೆ ಸಿಗದೇ ಇದ್ದರೆ, ಜಿಲ್ಲಾ ಪಂಚಾಯತಿಗಳ ಮುಂದೆ ಅನಿರ್ದಿಷ್ಟ ಪ್ರತಿಭಟನೆ ಹಾಗೂ ಬೆಂಗಳೂರು ಚಲೋ ಕರೆ ಕೊಡಲಾಗುವುದು, ಕಾರಣ ಸಚಿವರು ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಬೇಡಿಕೆಳನ್ನು ಈಡೇರಿಸಲು ಸಹಕರಿಸಬೇಕಾಗಿ ಮನವಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಮಹಿಳೆ ಕಾಣೆ: ಪತ್ತೆಗೆ ಮನವಿ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ನಾಗನೂರು ಗ್ರಾಮದ ವಾಸಿಯಾದ 23 ವರ್ಷ(2011ಕ್ಕೆ) ವಯಸ್ಸಿನ ರಂಗಮ್ಮ ಎಂಬ ಮಹಿಳೆ ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಲು ಹದಡಿ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.ನಾಗನೂರು ಗ್ರಾಮದ ರಂಗಮ್ಮ 12 ವರ್ಷಗಳ ಹಿಂದೆ ಮನೆಯಿಂದ ಹೊರ ಹೋದವರು ಇಂದಿನವರೆಗೂ ಮರಳಿ ಬಂದಿರುವುದಿಲ್ಲ ಎಂದು ದೂರು ದಾಖಲಾಗಿರುತ್ತದೆ.ಚೆಹರೆ ವಿವರ; 5.1 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು ಹಾಗೂ ಕಪ್ಪು ಬಣ್ಣ ಹೊಂದಿದ್ದು, ಮನೆಯಿಂದ ಹೊರಹೋಗುವಾಗ ನೀಲಿ ಮತ್ತು ಬಿಳಿ ಬಣ್ಣದ ಸೀರೆ, ಬಿಳಿ ಕುಪ್ಪಸ ಧರಿಸಿರುತ್ತಾರೆ, ಕನ್ನಡ ಭಾಷೆ ಮಾತನಾಡುತ್ತಾರೆ.ಈ ವ್ಯಕ್ತಿ ಸುಳಿವು ಅಥವಾ ಮಾಹಿತಿ ದೊರೆತಲ್ಲಿ ಹದಡಿ ಪೊಲೀಸ್ ಠಾಣೆ ದೂ. ಸಂ–9480803254, 08192218405 ದಾವಣಗೆರೆ ಕಂಟ್ರೋಲ್ ರೂಂ. ದೂ. ಸಂ–08192–253100ಗೆ ಕರೆಮಾಡಿ ಮಾಹಿತಿ ನೀಡಲು ತಿಳಿಸಲಾಗಿದೆ.

### ಮಹಿಳೆ ಕಾಣೆ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ನಾಗನೂರು ಗ್ರಾಮದ ವಾಸಿಯಾದ 19 ವರ್ಷ(2002ಕ್ಕೆ) ವಯಸ್ಸಿನ ಶಾರದಮ್ಮ ಎಂಬ ಮಹಿಳೆ ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಲು ಹದಡಿ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.ನಾಗನೂರು ಗ್ರಾಮದ ಶಾರದಮ್ಮ 20 ವರ್ಷಗಳ ಹಿಂದೆ ಮನೆಯಿಂದ ಹೊರ ಹೋದವರು ಇಂದಿನವರೆಗೂ ಮರಳಿ ಬಂದಿರುವುದಿಲ್ಲ ಎಂದು ದೂರು ದಾಖಲಾಗಿರುತ್ತದೆ.ಚೆಹರೆ ವಿವರ; 5.2 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು ಹಾಗೂ ಕಪ್ಪು ಬಣ್ಣ ಹೊಂದಿದ್ದು, ಮನೆಯಿಂದ ಹೊರಹೋಗುವಾಗ ಹಳದಿ ಬಣ್ಣದ ಸೀರೆ, ಕಪ್ಪು ಕುಪ್ಪಸ ಧರಿಸಿರುತ್ತಾರೆ, ಕನ್ನಡ ಭಾಷೆ ಮಾತನಾಡುತ್ತಾರೆ.ಈ ವ್ಯಕ್ತಿ ಸುಳಿವು ಅಥವಾ ಮಾಹಿತಿ ದೊರೆತಲ್ಲಿ ಹದಡಿ ಪೊಲೀಸ್ ಠಾಣೆ ದೂ. ಸಂ–9480803254, 08192218405 ದಾವಣಗೆರೆ ಕಂಟ್ರೋಲ್ ರೂಂ. ದೂ. ಸಂ–08192–253100ಗೆ ಕರೆಮಾಡಿ ಮಾಹಿತಿ ನೀಡಲು ತಿಳಿಸಲಾಗಿದೆ.

### ಭವಿಷ್ಯನಿಧಿ ವಿನಾಯತಿ ರದ್ದು ಪ್ರಕ್ರಿಯೆ

» ದಾವಣಗೆರೆ


ಹರಿಹರದ ಮೈಸೂರು ಕಿರ್ಲೋಸ್ಕರ್ ಲಿಮಿಟೆಡ್‌ಗೆ ಭವಿಷ್ಯನಿಧಿ ವಿನಾಯಿತಿ ನೀಡಲಾಗಿದ್ದು, ಪ್ರಸ್ತುತ ಭವಿಷ್ಯನಿಧಿ ವಿನಾಯತಿ ರದ್ದುಗೊಳಿಸುವ ಪ್ರಕ್ರಿಯೆ ಇಪಿಎಫ್ ಓ ಪ್ರಧಾನ ಕಛೇರಿ ದೆಹಲಿಯಲ್ಲಿ ಜಾರಿಯಲ್ಲಿರುತ್ತದೆ.ಸಂಸ್ಥೆಯಿಂದ ಯಾವುದೇ ಭವಿಷ್ಯನಿಧಿ ಮೊತ್ತ ಬಾಕಿಗಳು ಬಾಕಿಯಿದಲ್ಲಿ, ಅಂತಹ ಭವಿಷ್ಯನಿಧಿ ಚಂದಾದಾರರು ಅಥವಾ ಹಕ್ಕುದಾರರು 30 ದಿನಗಳ ಒಳಗೆ ಭವಿಷ್ಯ ನಿಧಿ ಆಯುಕ್ತರು, ಭವಿಷ್ಯ ನಿಧಿ ಭವನ, ಇ–1(ಬಿ), ಅಟಲ್ ಬಿಹಾರಿ ವಾಜಪೇಯಿ ಲೇಔಟ್, ಮಲ್ಲಿಗೇನಹಳ್ಳಿ, ಶಿವಮೊಗ್ಗ (ಇಮೇಲ್ ವಿಳಾಸ ro.shivamogga@epfindia.gov.in ಇವರನ್ನು ದಾಖಲೆ ಸಹಿತ ಸಂಪರ್ಕಿಸಲು ಶಿವಮೊಗ್ಗ ಕ್ಷೇತ್ರದ ಭವಿಷ್ಯನಿಧಿ ಆಯುಕ್ತರಾದ ರಾಮ ಆನಂದ ತಿಳಿಸಿದ್ದಾರೆ.

### ಬಿ.ಇಡಿ ಕೋರ್ಸ್ ಪ್ರವೇಶಾತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ 2 ವರ್ಷದ ಬಿ.ಇಡಿ ಕೋರ್ಸಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೆಬ್‌ಸೈಟ್ https://schooleducation.karnataka.gov.in ಗೆ ಭೇಟಿ ನೀಡುವ ಮೂಲಕ ಅರ್ಜಿ ಸಲ್ಲಿಸುವ ವಿಧಾನ, ಅರ್ಹತೆ, ಮೀಸಲಾತಿ ವಿವರ ಹಾಗೂ ಇತರೆ ವಿವರವನ್ನು ಪಡೆದುಕೊಳ್ಳಬಹುದು. ಅರ್ಜಿ ಸಲ್ಲಿಸಲು ನವಂಬರ್ 29 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಡಯಟ್‌ನ ಹಿರಿಯ ಉಪನ್ಯಾಸಕ ಮಹಮದ್ ಅಯೂಬ್ ಸೊರಬ್, ಮೊ.ಸಂ. 9164489972 ಅಥವಾ ಕಚೇರಿ ದೂ.ಸಂ 08192 231156 ಗೆ ಸಂಪರ್ಕಿಸಲು ಡಯಟ್ ಪ್ರಾಚಾರ್ಯರು ಹಾಗೂ ಪದನಿಮಿತ್ತ ಉಪನಿರ್ದೇಶಕಿ ಗೀತಾ ತಿಳಿಸಿದ್ದಾರೆ.

# 1973 ಕರ್ನಾಟಕ ವರ್ತಮಾನ ಹೇಗಿತ್ತು?




ನವೆಂಬರ್ 1 ರಂದು ಹಂಪಿಯಲ್ಲಿ ಕರ್ನಾಟಕ ಒಗ್ಗೂಡಿದಾಗ ರಾಜ್ಯಪಾಲರಾಗಿದ್ದ ಜಯಚಾಮರಾಜ ಒಡೆಯರು ಕರ್ನಾಟಕದ ಜ್ಯೋತಿ ಬೆಳಗಿಸಿದರು. 'ಕರ್ನಾಟಕ' ಎಂಬ ನಾಮಫಲಕವೊಂದನ್ನು ಅನಾವರಣ ಮಾಡಿದರು.



1973 ರಲ್ಲಿ ಡಿ.ದೇವರಾಜ ಅರಸು ಕರ್ನಾಟಕದ ಮುಖ್ಯಮಂತ್ರಿಯಾಗಿದ್ದರು. ಕೇಂದ್ರದಲ್ಲಿ ಇಂದಿರಾ ಗಾಂಧಿಯವರು ಸಮರ್ಥ ಆಡಳಿತಗಾರರಾಗಿದ್ದರು. ಆದರೆ ಅವರ ಮಂತ್ರಿಮಂಡಲದ ಮಂತ್ರಿಗಳು ಅವರಂತೆ ನಡೆಯದೆ ಸರ್ಕಾರ ಟೀಕೆಗೆ ಗುರಿಯಾಗಿತ್ತು. ಇಂಥದ್ದೆ ವಿಚಿತ್ರ ಸ್ಥಿತಿ ಅರಸರದು ಕೂಡ. ಅರಸು ಕರ್ನಾಟಕ ಕಂಡ ಸಮರ್ಥ ಮುಖ್ಯಮಂತ್ರಿ ಎನ್ನುವುದು ಆಗಿನ ಜನಾಭಿಪ್ರಾಯವಾಗಿತ್ತು. ಆದರೆ ಅವರ ಮಂತ್ರಿ ಮಂಡಲ ಅವರದೇ ದಾರಿಯಲ್ಲಿ ನಡೆದದ್ದು ಕಡಿಮೆ. ಕೆಲ ಮಂತ್ರಿಗಳ ಮಿತಿ ಮೀರಿದ ವರ್ತನೆ ಹಾಗೂ ಅಧಿಕಾರದ ದುರುಪಯೋಗದ ಪ್ರಕರಣಗಳು ಅರಸರನ್ನು ನೆರಳಿನಂತೆ ಹಿಂಬಾಲಿಸಿದವು. ಪತ್ರಿಕೆಗಳಲ್ಲಿ ಟೀಕೆ ಹಾಗೂ ವಿಧಾನ ಮಂಡಲದಲ್ಲಿ ಶಸ್ತ್ರ ಚಿಕಿತ್ಸೆ ನಡೆದರೂ ಕೂಡ, ಆ ಮಂತ್ರಿಗಳು ತಮ್ಮನ್ನು ತಿದ್ದಿಕೊಳ್ಳಲಿಲ್ಲ. ಇದರಿಂದಾಗಿ ಮಂತ್ರಿಗಳ ಮೇಲಿನ ಬಾಣ ಪ್ರಯೋಗ ಮುಖ್ಯಮಂತ್ರಿಗಳಿಗೂ ನಾಟುತ್ತಿದ್ದವು.

1973ರ ನವೆಂಬರ್ 1ರಂದು ಮೈಸೂರು ರಾಜ್ಯಕ್ಕೆ 'ಕರ್ನಾಟಕ' ಎಂಬ ನಾಮಕರಣವಾಯಿತು. ಆಗ ಕರ್ನಾಟಕದಾದ್ಯಂತ ಸಂಭ್ರಮದ ವಾತಾವರಣ. ಮಾಧ್ಯಮಗಳು ಕರ್ನಾಟಕಕ್ಕೆ ಹೆಸರು ತಂದು ದೇವರಾಜರು ಹೆಸರಾದರು ಎಂದೆಲ್ಲಾ ವರದಿ ಮಾಡಿದವು. ನವೆಂಬರ್ 1 ರಂದು ಹಂಪಿಯಲ್ಲಿ ಕರ್ನಾಟಕ ಒಗ್ಗೂಡಿದಾಗ ರಾಜ್ಯಪಾಲರಾಗಿದ್ದ ಜಯಚಾಮರಾಜ ಒಡೆಯರು ಕರ್ನಾಟಕದ ಜ್ಯೋತಿ ಬೆಳಗಿಸಿದರು. 'ಕರ್ನಾಟಕ' ಎಂಬ ನಾಮಫಲಕವೊಂದನ್ನು ಅನಾವರಣ ಮಾಡಿದರು. ಸಚಿವರುಗಳು ಅವರ ಕ್ಷೇತ್ರಗಳಿಗೆ ಹೋಗಿ 'ಕರ್ನಾಟಕ' ನಾಮಕರಣದ ಸಮಾರಂಭಗಳಲ್ಲಿ ಭಾಗವಹಿಸತೊಡಗಿದರು.

'ಕರ್ನಾಟಕ' ಎಂದು ನಾಮಕರಣವಾದ ಈ 1973 ರ ನಾಡಿನ ಅಂದಿನ ವರ್ತಮಾನ ಕುತೂಹಲಕಾರಿಯಾಗಿವೆ. ಕಳ್ಳತನದ ಗುಮಾನಿಯ ಮೇಲೆ ಹಾಸನದ ಪೊಲೀಸರು ಕಸ್ಟಡಿಗೆ ತೆಗೆದುಕೊಂಡ ರಾಜು ಎಂಬ ತರುಣನೊಬ್ಬ ಸತ್ತ. ಈ ಸುದ್ದಿ ಅಲ್ಲಿನ ಜನತೆಯಲ್ಲಿ ಪೊಲೀಸ್ ದೌರ್ಜನ್ಯದ ಶಂಕೆಯನ್ನು ಉಂಟುಮಾಡಿತು. ಇದರಿಂದಾಗಿ ಜನರು ಮತ್ತು ಪೊಲೀಸರ ನಡುವೆ ಘರ್ಷಣೆಯಾಯಿತು (ಸೆಪ್ಟಂಬರ್ 5. 1973). ಇದೇ ವರ್ಷದಲ್ಲಿ ಪೊಲೀಸರಿಂದ ಅಂತಹ ಹತ್ತಕ್ಕೂ ಹೆಚ್ಚು ಲಾಕಪ್‌ಡೆತ್‌ಗಳಾಗಿದ್ದವು. ಆ ಸಂದರ್ಭದಲ್ಲಿ ಪೊಲೀಸರ ಪರವಾಗಿ ನೀಡಲಾದ ವಿವರಣೆಗಳು ಏಕಪ್ರಕಾರ ವಾಗಿದ್ದವು. ಇದು ಬ್ರಿಟೀಷರ ಆಡಳಿತದ ಪೊಲೀಸ್ ದರ್ಪ ದೌರ್ಜನ್ಯಗಳು ಸ್ವತಂತ್ರ್ಯಾ ನಂತರದ ಭಾರತದಲ್ಲಿ ನಿರಂತರವಾದದ್ದರ ಚಿತ್ರವಾಗಿತ್ತು. ಕರ್ನಾಟಕದಾದ್ಯಂತ ಈ ಘಟನೆಯನ್ನು ವಿರೋಧಿಸಿ ಪ್ರತಿಭಟನೆಗಳಾದವು. ಮಂಗಳೂರಿನ ಕಮ್ಯುನಿಸ್ಟ್ ಪಾರ್ಟಿಯ ಸದಸ್ಯರ ಬೃಹತ್ ಪ್ರತಿಭಟನೆ, ತುಮಕೂರಿನ ವಿದ್ಯಾರ್ಥಿ ಫೆಡರೇಷನ್ ಹಾಸನದ ಘಟನೆ ವಿರೋಧಿಸಿ ತುಮಕೂರು ಬಂದ್ ಆಚರಿಸಿದ್ದು, ದಕ್ಷಿಣ ಮೈಸೂರಿನ ವಿದ್ಯಾರ್ಥಿ ಗಲಭೆ, ಮಂಡ್ಯದಲ್ಲಿ ವಿದ್ಯಾರ್ಥಿ ದಂಗೆಯಲ್ಲಿ ಪೊಲೀಸರಿಗೂ ವಿದ್ಯಾರ್ಥಿಗಳಿಗೂ ನಡೆದ ಸಂಘರ್ಷ. ಇವು ವಿದ್ಯಾರ್ಥಿಗಳು ಪೊಲೀಸ್ ದೌರ್ಜನ್ಯವನ್ನು ವಿರೋಧಿಸಿ ಮಾಡಿದ ಪತಿಭಟನೆಗಳು. ಇವುಗಳಿಗೆ ಮುಖ್ಯಮಂತಿಯ ಭರವಸೆಯೆಂದರೆ 'ಹಾಸನದಲ್ಲಿ ಸಾವು ಅನುಮಾನಸ್ಪದ ನಿಜಾಂಶ ತಿಳಿಯಲು ಸರ್ಕಾರದ ಸರ್ವ ಪ್ರಯತ್ನ' ಎನ್ನುವುದಾಗಿತ್ತು. 12 ಸೆಪ್ಟಂಬರ್ 1973ರಲ್ಲಿ ಎಲ್ಲ ಪತ್ರಿಕೆಗಳಲ್ಲಿ ಹಾಸನದ ಘಟನೆ ಮುಖಪುಟದ ಸುದ್ದಿಯಾಯಿತು.

ರಾಸಾಯನಿಕ ಗೊಬ್ಬರದ ಹಾವಳಿಗೆ ರೈತರು ತತ್ತರಿಸಿದ್ದರು. ಹಾಗಾಗಿ ಸೀಮೆಗೊಬ್ಬರಕ್ಕಾಗಿ ಪ್ರತಿಭಟನೆಗಳು ಇದೇ ಸಮಯದಲ್ಲಿ ನಡೆದವು. ಸೆಪ್ಟಂಬರ್ 13 ರಂದು ಸಂಜೆ ಸಾವಿರಕ್ಕೂ ಹೆಚ್ಚು ಮಂದಿ ರೈತರು ದಾವಣಗೆರೆಯ ಸಬ್ ಡಿವಿಜನಲ್ ಅಧಿಕಾರಿಗಳ ಕಛೇರಿಗೆ ಮುತ್ತಿಗೆ ಹಾಕಿ 'ನಗರದಲ್ಲಿರುವ ಅಘೋಷಿತ ಹಾಗೂ ಕಳ್ಳ ದಾಸ್ತಾನು ಗೊಬ್ಬರ ವರ್ತಕರಲ್ಲಿ ರುವುದೆಂದೂ, ಗೊಬ್ಬರಕ್ಕಾಗಿ ತಾವುಗಳು ಪರಿತಪಿಸುತ್ತಿರುವುದಾಗಿಯೂ, ದಾಸ್ತಾನು ಹೊರಗೆಳೆದು ತಮಗೆ ನೀಡಬೇಕೆಂದು ಎಚ್ಚರಿಕೆಯ ಬೇಡಿಕೆ ಸಲ್ಲಿಸಿದರು. ದಾವಣಗೆರೆಯ ಶಾಸಕಿ ಶ್ರೀಮತಿ ನಾಗರತ್ನಮ್ಮ ರೈತರ ಪರವಾಗಿ ಒತ್ತಾಯಿಸಿದರು. ಸೆಪ್ಟಂಬರ್ 17 ರಂದು ಭದ್ರಾವತಿಯಲ್ಲಿಯೂ ಸೀಮೆಗೊಬ್ಬರಕ್ಕಾಗಿ ನೂರಾರು ಮಂದಿ ರೈತರು ಪ್ರತಿಭಟಿಸಿದರು. ತಹಶೀಲ್ದಾರರು, ಬಿ.ಡಿ.ಓ. ಮತ್ತು ಕೃಷಿ ಇಲಾಖೆಯ ಅಸಿಸ್ಟೆಂಟ್ ಡೈರೆಕ್ಟರ್ ಕಛೇರಿಗಳನ್ನು ಬಲವಂತವಾಗಿ ಪ್ರವೇಶಿಸಲು ಯತ್ನಿಸಿ ಗೊಂದಲ ಉಂಟಾಯಿತು. ಪೊಲೀಸರಿಗೂ ರೈತರಿಗೂ ಘರ್ಷಣೆಯೂ ಆಯಿತು. ಹೀಗೆ ಕರ್ನಾಟಕದಲ್ಲಿ ಹಲವಾರು ಕಡೆ ಸೀಮೆಗೊಬ್ಬರಕ್ಕಾಗಿ ಕೃಷಿ ಇಲಾಖೆಯನ್ನು ರೈತರು ಮುತ್ತಿಗೆ ಹಾಕಿದ ಘಟನೆಗಳು ನಡೆದವು.

ಬೆಲೆ ಏರಿಕೆ ಮತ್ತು ಆಹಾರ ಅಭಾವಕ್ಕಾಗಿಯೂ ಕರ್ನಾಟಕದ ಬಹುತೇಕ ಕಡೆಗಳಲ್ಲಿ ದೊಂಬಿ ಗಲಭೆಗಳಾದವು. ರಾಣಿಬೆನ್ನೂರಿನಲ್ಲಿ ಧಾನ್ಯ ವ್ಯಾಗನ್‌ಗಳ ಮೇಲೆ ಲೂಟಿ ನಡೆದಿದ್ದರಿಂದ ಪೊಲೀಸರು ಗೋಲಿಬಾರ್ ಮಾಡಿದಾಗ ಒಬ್ಬ ವ್ಯಕ್ತಿ ಮೃತಪಟ್ಟನು. ಗುಬ್ಬಿಯಲ್ಲಿ ಬೆಲೆ ಏರಿಕೆ ವಿರೋಧಿಸಿ ಸರ್ಕಾರಿ ಗೋದಾಮುಗಳನ್ನು ಲೂಟಿ ಮಾಡಿದ್ದಕ್ಕಾಗಿ 30 ವಿದ್ಯಾರ್ಥಿಗಳನ್ನು ಬಂಧಿಸಲಾಯಿತು. ಪಾವಗಡದಲ್ಲಿ ಹಣ್ಣಿನ ಅಂಗಡಿಗಳ ಲೂಟಿ, ಯಲಹಂಕದಲ್ಲಿ ಕೃಷಿ ಮಾರುಕಟ್ಟೆಗಳ ಮೇಲೆ ರೈತರ ದಾಳಿ, ಸೆ.20ರಂದು ಕೃಷಿಯ ಹಾಗೂ ಕೃಷಿ ಕಾರ್ಮಿಕರ ಬೇಡಿಕೆಗಳ ಬಗ್ಗೆ ಒತ್ತಾಯ ಮಾಡಲು ದಕ್ಷಿಣ ಕನ್ನಡ ಜಿಲ್ಲೆಯ ಕೃಷಿಕರು ಪುತ್ತೂರು ಹಾಗೂ ಕುಂದಾಪುರಗಳಲ್ಲಿ ಅಸಿಸ್ಟೆಂಟ್ ಕಮೀಷನರುಗಳ ಕಛೇರಿ ಮುಂದೆ ನಡೆಸಿದ ಧರಣಿ, ದೆಹಲಿಯಲ್ಲಿ ಬಸ್ ಸಾರಿಗೆಯ ಅವ್ಯವಸ್ಥೆ ವಿರೋಧಿಸಿ ಭಗತ್‌ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಮೂರು ಬಸ್ಸಿಗೆ ಬೆಂಕಿ ಇಟ್ಟಿದ್ದು. ಮದ್ಯಪಾನ ವಿರೋಧಿ ಚಳುವಳಿಗಳು ಕರ್ನಾಟಕದಲ್ಲಿ ನಡೆಯುತ್ತಿದ್ದ ಕಾಲಕ್ಕೆ ತಮಿಳುನಾಡಿನ ಮುಖ್ಯಮಂತ್ರಿ ಎಂ.ಕರುಣಾನಿಧಿಯವರು ಮುಂದಿನ ವರ್ಷದಿಂದ ಮದ್ಯಪಾನ ನಿಷೇಧ ಎಂದು ಘೋಷಿಸಿದ್ದು. ಈ ಎಲ್ಲ ಘಟನೆಗಳು ಕರ್ನಾಟಕದ ಸಾಮಾಜಿಕ ಸ್ಥಿತಿಯನ್ನು ಭಿನ್ನವಾಗಿ ಚಿತ್ರಿಸುತ್ತವೆ.

ಕರ್ನಾಟಕದಲ್ಲಿ 1973ರಲ್ಲಿ ಅಸ್ಪೃಶ್ಯತೆ ಹಸಿಹಸಿಯಾಗಿ ಭೀಕರವಾಗಿತ್ತು. ಚಾಮರಾಜನಗರ ತಾಲ್ಲೂಕು ಸಂತೆ ಮಾರನಹಳ್ಳಿಯಲ್ಲಿ ಸವರ್ಣೀಯ ಹಿಂದೂಗಳು ಹರಿಜನರಿಗೆ ಸಾರ್ವಜನಿಕ ಬಹಿಷ್ಕಾರ ಹಾಕಲಾಗಿತ್ತು. ಹರಿಜನರನ್ನು ಊರಿನವರು ಯಾವ ಕೆಲಸಕ್ಕೂ ಕರೆಯದೆ ಅತಂತ್ರ ಸ್ಥಿತಿಯಲ್ಲಿ ಬದುಕುವಂತೆ ಮಾಡಿದ್ದರು. ಸೆಪ್ಟಂಬರ್ 11 ರಂದು ವಿಧಾನಸಭೆಯಲ್ಲಿ ಈ ಬಗ್ಗೆ ಚರ್ಚೆ ಆದರೂ ಕಟ್ಟುನಿಟ್ಟಿನ ಕ್ರಮವೇನೂ ಜಾರಿಯಾಗಲಿಲ್ಲ. ಇದು ಒಂದು ಘಟನೆ ಮಾತ್ರ. ಇದೇ ವರ್ಷದಲ್ಲಿ ಇಂತಹದೇ ಪ್ರಕರಣಗಳು ಇಪ್ಪತ್ತಕ್ಕೂ ಹೆಚ್ಚು ನಡೆದವು. ಇವುಗಳು ಮಾಧ್ಯಮದ ಕಣ್ಣಿಗೆ ಸಿಕ್ಕುವು ಮಾತ್ರ. ಇದೇ ಸಂದರ್ಭದಲ್ಲಿ ತಲೆ ಮೇಲೆ ಮಲ ಹೊರುವ ಪದ್ಧತಿಯ ರದ್ಧತಿಗೆ ಕೇಂದ್ರ ಯೋಜನೆಯೊಂದನ್ನು ರೂಪಿಸಿತು. ಮಧ್ಯಮ ವರ್ಗದ ಪಟ್ಟಣಗಳಲ್ಲಿ ತಲೆಮೇಲೆ ಮಲಹೋರುವ ಪದ್ಧತಿಯನ್ನು ರದ್ದು ಮಾಡಲು ಹೊಸ ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದಾಗಿ ಕಾಮಗಾರಿ ಮತ್ತು ನಗರಾಭಿವೃದ್ಧಿ ಸಚಿವ ಭೋಗಾಪಾಸ್ವಾನ್ ಶಾಸ್ತ್ರಿ ಸೆಪ್ಟಂಬರ್ 19ರಂದು ವರದಿಗಾರರಿಗೆ ತಿಳಿಸಿದರು. ರಾಜ್ಯ ಸರ್ಕಾರವೂ ಅಸ್ಪೃಶ್ಯತೆ ನಿವಾರಣೆಗೆ ಕಾನೂನುಗಳನ್ನು ಜಾರಿಗೊಳಿಸಿತು. ಮುಜರಾಯಿ ದೇವಸ್ಥಾನಗಳ ಸಮಿತಿಯಲ್ಲಿ ಹರಿಜನರಿಗೆ ಸದಸ್ಯತ್ವವನ್ನು ಕಡ್ಡಾಯಗೊಳಿಸಲಾಯಿತು. ಊರಿನ ಎಲ್ಲರ ಜೊತೆ ಹರಿಜನರೂ ಬಾವಿ, ಕೆರೆ, ನಲ್ಲಿಯ ನೀರನ್ನು ಬಳಸುವ ವ್ಯವಸ್ಥೆಗಾಗಿ ಶೇ 50%ರಷ್ಟು ಹರಿಜನರಿರುವ ಹಳ್ಳಿಗಳಿಗೆ ರಾಷ್ಟ್ರೀಯ ನೀರು ಪೂರೈಕೆ ಯೋಜನೆಯನ್ನು ಹಮ್ಮಿಕೊಳ್ಳಲಾಯಿತು. ಪಂಚಾಯ್ತಿ ಮತ್ತು ತಾಲ್ಲೂಕು ಅಭಿವೃದ್ಧಿ ಮಂಡಳಿಗಳ ಪ್ರದೇಶದ ಹರಿಜನರಿಗೆ ಓಡಾಡಲು ಪ್ರತಿ ಬಂಧಕವಿರುವ ಸಂಸ್ಥೆಗಳಿಗೆ ಧನ ಸಹಾಯ ನಿಲ್ಲಿಸಲಾಗುತ್ತದೆ ಎಂದು ಸರ್ಕಾರ ಎಚ್ಚರಿಸಿತು. ಇಂತಹ ಸಂದರ್ಭದಲ್ಲಿಯೇ ಸರ್ಕಾರದ ದುರ್ಬಲತೆ, ರಾಜಕೀಯ, ಭ್ರಷ್ಟಚಾರ ವಿರೋಧಿಸಿ ಆಂಧ್ರಪ್ರದೇಶದ ವಾರಂಗಲ್‌ನಲಿ ಈ ರಾಷ್ಟ್ರದಲ್ಲಿ ಸಮಾಜವಾದವನ್ನು ಜಾರಿಗೆ ತರಲು ಜನತೆ ಶಸ್ತ್ರ ಸಜ್ಜಿತ ಹೋರಾಟಕ್ಕೆ ಸಿದ್ಧರಾಗಬೇಕು ಎಂದು ಕ್ರಾಂತಿಕಾರಿ ಬರಹಗಾರರ ಸಮ್ಮೇಳನ ಕರೆ ನೀಡಿತು.

ಒಂದು ವರ್ಷದ ಈ ಘಟನೆಗಳನ್ನು ನೋಡಿದರೆ 1973 ಸಂಘರ್ಷದ ವರ್ಷವಾಗಿ ಕಾಣುತ್ತೆ. ಹಾಸನದಲ್ಲಿ ಒಬ್ಬ ವಿದ್ಯಾರ್ಥಿಯ ಅನುಮಾನಾಸ್ಪದ ಸಾವು ನಾಂದಿಯಾಗಿ ರಾಜ್ಯದಾದ್ಯಂತ ವಿದ್ಯಾರ್ಥಿಗಳ ಚಳವಳಿ ತೀವ್ರರೂಪ ತಾಳಲು ಕಾರಣವಾಯಿತು. ಇಡೀ ರಾಜ್ಯಕ್ಕೆ ವ್ಯಾಪಿಸುವ ಭೀತಿಯುಂಟಾಯಿತು. ಚಳವಳಿ ಹಿಂಸಾತ್ಮಕ ತಿರುವು ಹೊಂದಿ ಅದನ್ನು ತಹಬದಿಗೆ ತರಲು ಪೊಲೀಸರು ರಾಜ್ಯದ 7 ಪಟ್ಟಣಗಳಲ್ಲಿ ಗೋಲಿಬಾರ್, ಸುಮಾರು 20 ಕಡೆ ಅಶ್ರವಾಯು, ಲಾಟಿ ಪ್ರಹಾರ ಮೊದಲಾದವುಗಳನ್ನು ನಡೆಸಬೇಕಾಯಿತು. ಇದರ ಫಲವಾಗಿ ಲೆಕ್ಕಕ್ಕೆ ಸಿಕ್ಕಂತೆ 5 ಜನ ಸತ್ತರು. ಪೊಲೀಸರೂ ಸೇರಿದಂತೆ ನೂರಾರು ಜನ ಗಾಯಗೊಂಡರು. ಅನೇಕ ಕಡೆಗಳಲ್ಲಿ ವಿದ್ಯಾರ್ಥಿಗಳ ಜೊತೆಗೆ ಇತರರೂ ಸೇರಿಕೊಂಡು ಧಾನ್ಯದ ಅಂಗಡಿಗಳು, ಸರ್ಕಾರಿ ಮಳಿಗೆಗಳು, ಸೀಮೆಗೊಬ್ಬರದ ದಾಸ್ತಾನಿನ ಮಳಿಗೆಗಳನ್ನು ಲೂಟಿ ಮಾಡಿ ಅವುಗಳನ್ನು ತಮಗಿಷ್ಟ ಬಂದಂತೆ ಹಂಚಿಕೊಂಡರು. ಅನೇಕ ವಾಹನಗಳು ಮತ್ತು ಮಂಡ್ಯದಲ್ಲಿ 100 ಕ್ಕೂ ಹೆಚ್ಚು ಗುಡಿಸಲುಗಳು ಅಗ್ನಿಗೆ ಆಹುತಿಯಾದವು.

ರಾಜ್ಯದಲ್ಲಾದ ಗಲಭೆ ದೊಂಬಿ ಅಗ್ನಿ ಸ್ಪರ್ಶ, ವಿದ್ಯಾರ್ಥಿಗಳ ಪತಿಭಟನೆ, ಬೆಲೆ ಏರಿಕೆಯ ವಿರುದ್ಧದ ಜನರ ಧೋರಣೆ ಹಿಂಸಾತ್ಮಕ ರೂಪ ತಾಳಿತು. ಇಷ್ಟೆಲ್ಲಾ ಆದದ್ದು ಯಾಕೆ ಎಂದರೆ ಹಸಿವು ಮತ್ತು ಕೊರತೆ. ಹಸಿವು ಎಲ್ಲಕ್ಕಿಂತ ಭೀಕರವಾದದ್ದು. ವಿಪರೀತ ಪರಿಣಾಮಗಳಿಗೆ ಕಾರಣವಾಗುವಂಥದ್ದು ಆಹಾರಕ್ಕಾಗಿ ಪರಿತಪಿಸಿದ ಇಕ್ಕಟ್ಟಿನ ದಿನಗಳು ಇವಾಗಿದ್ದವು. ಆ ಕಾರಣದಿಂದಲೇ ಈ ಪರಿಯ ಪ್ರತಿಭಟನೆ, ಆಹಾಕಾರ ಭಾರತದಾದ್ಯಂತ ಇತ್ತು. ಅದು ಕರ್ನಾಟಕದಲ್ಲಿ ತೀವ್ರವಾಗಿಯೇ ಅಭಿವ್ಯಕ್ತಗೊಂಡಿತು. ಮೈಸೂರಿನಂಥ ಅಕ್ಕಿ ಕಣಜದ ಪ್ರದೇಶದಲ್ಲಿ ಕೆ.ಜಿ.ಯ ಧಾರಣೆ ಬೆಳಗಾಗುವುದರಲ್ಲಿ 2 ರೂಪಾಯಿನಷ್ಟು ಏರಿದರೆ, ಉಳಿದೆಡೆ ಹಕ್ಕಿ ಸಿಗುವುದೇ ಕಷ್ಟವಾಯಿತು. ಇದರಿಂದಾಗಿ ಜನರು ಪ್ರಕ್ಷುಬ್ಧರಾದರು. ಗಲಭೆ ದೊಂಬಿ ಲೂಟಿಗಳಿಗೆ ಗೂಂಡಾಗಳು, ಸಮಾಜ ವಿರೋಧಿ ಶಕ್ತಿಗಳೂ ಕಾರಣವಾದದ್ದು ಸಹಜವಾಗಿತ್ತು. ಸಾಮಾನ್ಯವಾಗಿ ಚಳವಳಿಗಳು ತೀವ್ರ ಸ್ವರೂಪ ತಾಳಿದಾಗ ಅಂಥವರು ಅದನ್ನು ದುರ್ಬಳಕೆ ಮಾಡಿಕೊಳ್ಳುವುದು ಹೊಸದೇನಲ್ಲ. ಆದರೆ ಚಳವಳಿಯ ಒಟ್ಟು ಮನಸ್ಥಿತಿಯನ್ನು ಈ ನೆಪದಲ್ಲಿ ಸರಳೀಕರಿಸಲು ಸಾಧ್ಯವಿಲ್ಲ.

ಇಲ್ಲಿನ ವಿವರಗಳು ಎಪ್ಪತ್ತರ ದಶಕದ ಕರ್ನಾಟಕವನ್ನು ಪರಿಚಯಿಸುತ್ತವೆ. ಒಂದು: ರಾಜ್ಯದಲ್ಲಿ ಶಾಂತಿ ಇರಲಿಲ್ಲ ಮುಖ್ಯವಾಗಿ 'ಆಹಾರ' ಇರದಿದ್ದ ಮೇಲೆ ಶಾಂತಿ ನೆಲೆಸಲು ಹೇಗೆ ಸಾಧ್ಯ. ಎರಡು: ಸಾಮಾನ್ಯ ಜನರಿಗೆ ಪ್ರತಿಭಟನೆಯ ವಿನಃ ಮತ್ತಾವ ದಾರಿಗಳೂ ಕಾಣದಂತಾಗಿತ್ತು. ತಾವು ಹಸಿದಿದ್ದಾಗಲೂ ಕೆಲವರು ಸುಖದ ಸುಪ್ಪತ್ತಿಗೆಯಲ್ಲಿರುವುದು ಜನರನ್ನು ಕೆರಳಿಸಿತ್ತು. ಮೂರು: ದೊಂಬಿ ಗಲಭೆಗಳ ನೆಪದಲ್ಲಿ ಸಂಪತ್ತಿನ ಸಂಗ್ರಹಗಳನ್ನು ಕೊಳ್ಳೆ ಹೊಡೆಯುವುದು, ಶ್ರೀಮಂತರ ಮೇಲಿನ ತಮ್ಮ ಕೋಪವನ್ನು ಈ ರೀತಿ ಕಡಿಮೆ ಮಾಡಿಕೊಳ್ಳುವುದು. ನಾಲ್ಕು: ಒಂದು ವರ್ಷದಲ್ಲಿ ಕನಿಷ್ಟ ಮೂರು ನೂರಕ್ಕೂ ಹೆಚ್ಚಿನ ಪ್ರತಿಭಟನೆ ಚಳುವಳಿಗಳು ಜನಸಮುದಾಯದ ಪ್ರತಿಭಟನಾ ಮನೋಭಾವ ಮತ್ತು 1973ರ ಸಂದರ್ಭದಲ್ಲಿದ್ದ ಸಾಮಾಜಿಕ ರಾಜಕೀಯ ವ್ಯವಸ್ಥೆಗೆ ಜನತೆ ಸ್ಪಂದಿಸುತ್ತಿದ್ದ ಬಗೆಯನ್ನು ತೋರಿಸುತ್ತದೆ.

ಚಳವಳಿಯ ಭೂಮಿಕೆ ಸಿದ್ಧವಾದ ಕರ್ನಾಟಕದ ಒಟ್ಟು ಪರಿಸರ ಸೊಂಡೂರಿನಲ್ಲಿ ರೈತ ಚಳವಳಿಗೆ ಪರೋಕ್ಷವಾಗಿ ಸ್ಫೂರ್ತಿಯಾಯಿತು. ಸೊಂಡೂರು ಎಂಬ ಪುಟ್ಟ ತಾಲೂಕಿನ ರೈತರ ವಿಷಯವಾಗಿದ್ದ ಭೂಮಿಯ ಸಮಸ್ಯೆ ರಾಜ್ಯದ ಸಮಸ್ಯೆಯಾಯಿತು. ಈವರೆಗೂ 'ರಾಜ'ರನ್ನೇ ಆರಾಧ್ಯ ದೈವವಾಗಿಸಿಕೊಂಡು, ರಾಜರ ಎಲ್ಲ ಅಪ್ಪಣೆಗೂ ತಲೆ ಹಾಕುತ್ತಾ ಬಂದವರಲ್ಲಿ ಕೆಲವರು ಎಚ್ಚೆತ್ತು ಚಳವಳಿಗೆ ಕಾರಣರಾದರು. ರಾಜ್ಯದಾದ್ಯಂತ ಚಳವಳಿಗಳ ಮುಖಂಡತ್ವ ವಹಿಸಿಕೊಂಡಿದ್ದವರು ಈ ರೈತರ ಹೋರಾಟಕ್ಕೆ ಬೆಂಬಲಿಸಿದರು. ಸೋಷಲಿಸ್ಟ್ ಪಾರ್ಟಿಯು ಇದು ತನ್ನ ನಿರ್ಣಾಯಕ ಹೋರಾಟವೂ ಎಂಬಂತೆ ಚಳವಳಿಯನ್ನು ರೂಪಿಸಿತು.



» ಲೇಖನ: ಅರುಣ್ ಜೋಳದ ಕೂಡ್ಲಿಗಿ

## ಹೊಸದುರ್ಗ ತಾಲೂಕಿನಾದ್ಯಂತ ಮಳೆಯ ಆಗಮನ ಧರೆ ಮೆಧುವಾಗುವಂತೆ ಸುರಿದ ಸ್ವಾತಿ ಮಳೆಗೆ ಎರಡು ಮನೆಗಳು ಕುಸಿತ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಕಳೆದ ಸುಮಾರು 6 ರಿಂದ 7 ತಿಂಗಳು ಕಳೆದರೂ ಮಳೆ ಇಲ್ಲದೆ ಕಂಗಾಲಾಗಿದ್ದ ತಾಲೂಕಿನ ಜನತೆ ಮುಖ್ಯವಾಗಿ ಕೃಷಿಕರಿಗೆ ಕಳೆದ ಎರಡು ಮೂರು ದಿನಗಳಿಂದ ಸಂವೃದ್ಧಿಯಾಗಿ ಬಂದ ಮಳೆಗೆ ಸಂತಗೊಂಡಿದ್ದಾರೆ.ತಾಲೂಕಿನಾದ್ಯಂತ ಸಾಕಷ್ಟು ಮಂದಿ ರೈತರು ಮಳೆಯ ನಿರೀಕ್ಷೆ ಇಟ್ಟುಕೊಂಡು ಅಡಿಕೆ ಮತ್ತು ತೆಂಗು ಹಾಕಿದ್ದರು.ಮಳೆ ಇಲ್ಲ ಎಂಬ ಆತಂಕದಿಂದೆ ದಿನದೂಡುತಿದ್ದರು ಆದರೆ ಈಗ ಬಂದಿರುವ ಮಳೆಗೆ ಹಾಗೂ ಮುಂದೆ ಮಳೆ ಬರಬಹುದು ಎಂಬ ನಿರೀಕ್ಷೆ ಇಟ್ಟುಕೊಂಡಿದ್ದ ಅಡಿಕೆ ತೆಂಗು ಹಾಕಿರುವ ರೈತರಿಗೆ ಈಗ ಬರುತ್ತಿರುವ ಮಳೆಗೆ ಬಾಯಿಗೆ ಲಡ್ಡು ಬಿದ್ದಂತಾಗಿದೆ.



ಮುಖ್ಯವಾಗಿ ರೈತಾಪಿ ವರ್ಗಕ್ಕೆ ಮಳೆ ಎಲ್ಲದೆ ಹಾಕಿದ್ದ ಬೆಳೆಗಳೆಲ್ಲ ಸಂಪೂರ್ಣವಾಗಿ ನೆಲಕಚ್ಚಿ ಹೋಗಿದ್ದವು ಅದರಲ್ಲೂ ತಾಲೂಕಿನ ರೈತರು ಸಾಕಷ್ಟು ಕಡೆ ಮೆಕ್ಕೆಜೋಳವನ್ನ ಹಾಕಿ ಮಳೆ ಇಲ್ಲದೆ ಬೆಳೆಯಲ್ಲಾಮ ಒಣಗಿ ಕೈ ಕಟ್ಟಿ ಕೂತಿದ್ದರು ತಾಲೂಕಿನ ಕೆಲವು ಕಡೆ ರೈತರು ಈರುಳ್ಳಿ ಬೆಳೆ ಬೆಳೆದು ಸಾಕಷ್ಟು ನಷ್ಟ ಅನುಭವಿಸಿದ್ದರು ಆದರೂ ಸಹಾ ಇದರ ನಡೆವೆ ಈರಳ್ಳಿ ಧರ ಗಗನಕ್ಕೆ ಹೇರಿದೆ ಎಂದು ಕೇಳಿ ಈರುಳ್ಳಿ ಬೆಳೆದಿದ್ದ ಬಹುತೇಕ ರೈತರು ಕಿತ್ತು ಮಾರುಕಟ್ಟೆಗೆ ಹಾಕಿ ಅಲ್ಪ ಸ್ವಲ್ಪ ರೈತರು ಆದಾಯ ಮಾಡಿಕೆಂಡಿದ್ದರೆ ಇನ್ನು ಕಿತ್ತು ಮಾರಲು ಮುದಾಗಿದ್ದ ರೈತರು ತಮ್ಮ ಹೊಲದಲ್ಲಿ ಈರುಳ್ಳಿ ಕೀಳಿಸಿ ನಿರೀಕ್ಷೆ ಇಲ್ಲದೆ ಎಕ ಎಕಿ ಬಂದ ರಭಸದ ಮಳೆಯಿಂದ ಈರುಳ್ಳಿ ನೆಂದ ಪರಿಣಾಮ ತೀರ್ವ ಅಗಾತಕ್ಕೆ ಒಳಗಾಗಿದ್ದಾರೆ. ಮಳೆಯ ನಿರೀಕ್ಷೆ ಇಟ್ಟುಕೋಂಡು ಹಾಕಲಾಗಿದ್ದ ರಾಗಿ ಜೋಳ, ಹತ್ತಿ, ಶೇಂಗ ಬೆಳಗಳು ರೈತರಿಗೆ ಆದಾಯ ತರುವಲ್ಲಿ ತೃಪ್ತಿ ನೀಡಿಲ್ಲಾ ಎಂಬುದು ಅಷ್ಟೇ ಸತ್ಯ.ಈ ಬಾರಿ ಸಂಪೂರ್ಣ ಬರಗಾಲ ಆವರಿಸಿದ್ದು, ಯಾವುದೇ ಬೆಳೆಗಳು ಕೈ ಸೇರುವ ನಿರೀಕ್ಷೆಯಿಲ್ಲ. ಮುಂಗಾರು ಬೆಳೆಯಿಲ್ಲ, ಹಿಂಗಾರು ಬಿತ್ತನೆಗೆ ಸಮಯ ಮೀರಿದೆ. ಕೆರೆ, ಕಟ್ಟೆ ತುಂಬುವಷ್ಟು ಮಳೆಯಾಗಬೇಕು. ತಪ್ಪಿದ್ದಲ್ಲಿ ಮುಂದಿನ ದಿನಗಳಲ್ಲಿ ಆಹಾರ ಮತ್ತು ನೀರಿಗೆ ಹಾಹಾಕಾರ ಉಂಟಾಗಬಹುದು ಎಂಬುದು ಬಹುತೇಕ ರೈತರ ಆತಂಕವಾಗಿದೆ. ತಾಲ್ಲೂಕಿನ ವಿವಿಧೆಡೆ ಭಾನುವಾರ ಸೋಮವಾರ ಹಾಗೂ ಬುಧವಾರ ಮುಂಜಾನೆ ಹದ ಮಳೆಯಾಗಿದೆ. ಜುಲೈನಿಂದ ಮಳೆ ಕಾಣದೆ, ಬಿರುಕು ಬಿಡುವ ಹಂತದಲ್ಲಿದ್ದ ಭೂಮಿಗೆ ಸೋಮವಾರ ಸುರಿದ ಮಳೆಯಿಂದಾಗಿ ಇಳೆ ತಂಪಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T